ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ

NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 60 RNI Number : KNKAN/25/A2770 07-03-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :60 ರಾಯಚೂರು 07-03-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563

4.48 ಲಕ್ಷ ಕೋಟಿ ರೂ. ಗಾತ್ರದ ರಾಜ್ಯ ಬಜೆಟ್ ಮಂಡಿಸಿದ ಸಿದ್ದರಾಮಯ್ಯ

ರಾಜ್ಯದಲ್ಲಿ 16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣ ಬಳಕೆ ನಿಷೇಧ

ಬೆಂಗಳೂರು, ಮಾ.6-

ರಾಜ್ಯದಲ್ಲಿ16 ವರ್ಷದೊಳಗಿನ ಮಕ್ಕಳಿಗೆ ಸಾಮಾಜಿಕ ಜಾಲತಾಣ ಬಳಕೆಯನ್ನು ನಿಷೇಧಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಿಸಿದ್ದಾರೆ.

ಬಜೆಟ್ ಅಧಿವೇಶನದಲ್ಲಿ ಮಾತನಾಡಿದ ಮುಖ್ಯಮಂತ್ರಿ, ಹೆಚ್ಚುತ್ತಿರುವ ಮೊಬೈಲ್ ಬಳಕೆ ಮಕ್ಕಳ ಮೇಲೆ ಪರಿಣಾಮ ಬೀರುತ್ತಿರುವ ಹಿನ್ನೆಲೆಯಲ್ಲಿ ಹಾಗೂ ಅಡ್ಡಪರಿಣಾಮ ತಡೆಗಟ್ಟುವ ಹಿನ್ನೆಲೆಯಲ್ಲಿ ಈ ತೀರ್ಮಾನಕ್ಕೆ ಬರಲಾಗಿದೆ ಎಂದರು.



ವಿದ್ಯಾರ್ಥಿಗಳಲ್ಲಿ ಒತ್ತಡ ನಿವಾರಿಸಿ ಮಾನಸಿಕ ಆರೋಗ್ಯವನ್ನು ಸುಧಾರಿಸಲು 204 ಬಿ ಆರ್ ಸಿ ಕೇಂದ್ರಗಳಲ್ಲಿ ಓರ್ವ ಅರ್ಹ ಮಾನಸಿಕ ಆರೋಗ್ಯ ಸಲಹೆಗಾರ ನೇಮಕ ಮಾಡಲಾಗುವುದು ಎಂದು ಸಿದ್ದರಾಮಯ್ಯ ಪ್ರಕಟಿಸಿದರು.

ಗೃಹಲಕ್ಷ್ಮಿ ಯೋಜನೆಗೆ ಭರ್ಜರಿ ಅನುದಾನ: ಗೃಹಿಣಿಯರಿಗೆ ಬಜೆಟ್‌ನಲ್ಲಿ ಗುಡ್ ನ್ಯೂಸ್ ಕೊಟ್ಟ ಸಿದ್ದರಾಮಯ್ಯ

ಬೆಂಗಳೂರು,ಮಾ.6-

ಮುಖ್ಯಮಂತ್ರಿ ಹಾಗೂ ಹಣಕಾಸು ಸಚಿವರಾದ ಸಿದ್ದರಾಮಯ್ಯ 2026-27ನೇ ಸಾಲಿನ ಕರ್ನಾಟಕ ಬಜೆಟ್ ಅನ್ನು ವಿಧಾನ ಸಭೆಯಲ್ಲಿ ಮಂಡಿಸಿದ್ದಾರೆ. ದಾಖಲೆಯ 17ನೇ ಬಜೆಟ್ ಮಂಡಿಸಿರುವ ಸಿದ್ದರಾಮಯ್ಯ, ರಾಜ್ಯದ ಅಭಿವೃದ್ಧಿ ಹಾಗೂ ಜನಕಲ್ಯಾಣ ಯೋಜನೆಗಳಿಗೆ ಹೆಚ್ಚಿನ ಒತ್ತು ನೀಡಲಾಗಿದೆ ಎಂದು ಹೇಳಿದ್ದಾರೆ. ಈ ಬಜೆಟ್‌ನಲ್ಲಿ ವಿಶೇಷವಾಗಿ ಕಾಂಗ್ರೆಸ್ ಸರ್ಕಾರದ ಪ್ರಮುಖ ಗ್ಯಾರಂಟಿ ಯೋಜನೆಗಳಲ್ಲೂ ದಾದ ಗೃಹಲಕ್ಷ್ಮಿ ಯೋಜನೆಗೆ 28,608 ಕೋಟಿ ರೂಪಾಯಿ ಮೀಸಲಿ ರಿಸಲಾಗಿದೆ. ಈ ಯೋಜನೆಯ



ಮೂಲಕ ರಾಜ್ಯದ ಲಕ್ಷಾಂತರ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಸರ್ಕಾರ ಬದ್ಧವಾಗಿದೆ ಎಂದು ಸಿಎಂ ಹೇಳಿದ್ದಾರೆ.

ಗ್ಯಾರಂಟಿ ಯೋಜನೆಗಳು ಜನರ ಆರ್ಥಿಕ ಸ್ಥಿತಿಯನ್ನು ಸುಧಾರಿಸುವಲ್ಲಿ ಮಹತ್ವದ ಪಾತ್ರ ವಹಿಸುತ್ತಿವೆ ಎಂದು ಸಿದ್ದರಾಮಯ್ಯ ಹೇಳಿದರು. ಜೊತೆಗೆ ಮೂಲಸೌಕರ್ಯ ಅಭಿವೃದ್ಧಿಗೂ ಸರ್ಕಾರ ಹೆಚ್ಚಿನ ಆದ್ಯತೆ ನೀಡಿದೆ

3 ನೇ ಪುಟಕ್ಕೆ



ಮದ್ಯಪ್ರಿಯರಿಗೆ ಬಿಗ್ ಶಾಕ್ ನೀಡಿದ ಸಿದ್ದರಾಮಯ್ಯ: ಬಜೆಟ್ ನಲ್ಲಿ ಮಹತ್ವದ ನಿರ್ಧಾರ

ಬೆಂಗಳೂರು, ಮಾ. 6-

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಂದು (ಮಾ.6) ತಮ್ಮ 17ನೇ ಬಜೆಟ್‌ನಲ್ಲಿ ಅಬಕಾರಿ ಇಲಾಖೆಯ ಆದಾಯ ಹೆಚ್ಚಿಸಲು ಹೊಸ ತಂತ್ರ ರೂಪಿಸಿದ್ದಾರೆ. ಮದ್ಯದ ಮೇಲೆ ವಿಧಿಸುವ ತೆರಿಗೆಯ ಸ್ವರೂಪವನ್ನು ಬದಲಾಯಿಸುವ ಮೂಲಕ ರಾಜ್ಯದ ರಾಜಸ್ವ ಸಂಗ್ರಹವನ್ನು ಗಣನೀಯವಾಗಿ ಏರಿಕೆ ಮಾಡಲು ನಿರ್ಧರಿಸಿದ್ದಾರೆ. ಇನ್ನು ಮುಂದೆ ಮದ್ಯದಲ್ಲಿರುವ ಆಲ್ಕೋಹಾಲ್ ಅಥವಾ ಮದ್ಯದ ಅಂಶವನ್ನು ಆಧರಿಸಿ ತೆರಿಗೆ ವಿಧಿಸಲು

3 ನೇ ಪುಟಕ್ಕೆ

ನೀರಾವರಿಗೆ ಒತ್ತು; 22,436 ಕೋಟಿ ರೂ. ಮೀಸಲು

ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 4,41 ಲಕ್ಷ ಕೋಟಿ ರೂ. ಮೊತ್ತದ ಬೃಹತ್ ಬಜೆಟ್ ಮಂಡಿಸಿದ್ದಾರೆ. ಗ್ರಾಮೀಣ ಭಾಗಗಳಿಗೆ ನೀರೊದಗಿಸಲು ಹಲವಾರು ಯೋಜನೆಗಳನ್ನು ರೂಪಿಸಿರುವುದಾಗಿ ಘೋಷಿಸಿದ್ದಾರೆ. ಅದಕ್ಕಾಗಿ, ಸಣ್ಣ ಮತ್ತು ಬೃಹತ್ ನಿರಾವರಿಗಾಗಿ 22,436 ಕೋಟಿ ರೂ. ಬಜೆಟ್ ಹಂಚಿಕೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಬಜೆಟ್‌ನಲ್ಲಿ ಘೋಷಿಸಲಾದ ನೀರಾವರಿ ಯೋಜನೆಗಳ ಪ್ರಮುಖ ಅಂಶಗಳು;

ಮೇಕೆದಾಟು ಯೋಜನೆಯ ಪರಿಷ್ಕೃತ ವಿಸ್ತೃತ ಯೋಜನಾ ವರದಿಯನ್ನು () ಸಿದ್ಧಪಡಿಸಿ ಅನುಮೋದನೆಗೆ ಹಾಗೂ ಅರಣ್ಯ ಪ್ರದೇಶದ ಬಳಕೆಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಶೀಘ್ರ ಸಲ್ಲಿಕೆ.



ಎತ್ತಿನಹೊಳೆ ಸಮಗ್ರ ಕುಡಿಯುವ ನೀರಿನ ಯೋಜನೆಯ 2ನೇ ಹಂತದಲ್ಲಿ ಬಾಕಿ ಇರುವ 18.73 ಕಿ.ಮೀ ಉದ್ದದ ಕಾಲುವೆ ಕಾಮಗಾರಿ ಪೂರ್ಣಗೊಳಿಸಲು ಒತ್ತು. ಕೊರಟಗೆರೆ ತಾಲೂಕಿನ ವಡೇರಹಳ್ಳಿ ಸಮೀಪ 1.2 ಟಿ.ಎಂ.ಸಿ ಸಾಮರ್ಥ್ಯದ ಸಮತೋಲನಾ ಜಲಾಶಯ ನಿರ್ಮಾಣ.

ಭದ್ರಾ ಮೇಲ್ದಂಡೆ ಯೋಜನೆಗೆ ಕೇಂದ್ರವು 5,300 ಕೋಟಿ ರೂ. ಒದಗಿಸಿಲ್ಲ. ಆದರೂ, ಯೋಜನೆಗಾಗಿ 11,343 ಕೋಟಿ ರೂ.ಗಳ ಭರಿಸಲಾಗಿದೆ. ಈ ವರ್ಷ, 135 ಕಿ.ಮೀ ಉದ್ದದ ಚಿತ್ರದುರ್ಗ ಶಾಖಾ ಕಾಲುವೆ ಮತ್ತು ಫೀಡರ್ ಕಾಮಗಾರಿಗಳನ್ನು ಪೂರ್ಣಗೊಳಿಸಿ 157 ಕೆರೆ ತುಂಬಿಸಲು ಕ್ರಮ.

ಕೃಷ್ಣಾ ಮೇಲ್ದಂಡೆ ಯೋಜನೆಯಡಿ 3ನೇ ಹಂತದಲ್ಲಿ ಆಲಮಟ್ಟಿ ಅಣೆಕಟ್ಟನ್ನು 519.6 ಮೀ. ಯಿಂದ 524.256 ಮೀ. ಗೆ ಎತ್ತರಿಸಲು ತ್ವರಿತ ಕಾಮಗಾರಿ. ರೈತರು ಮತ್ತು ಸಂತ್ರಸ್ತರ ಬೇಡಿಕೆಯಂತೆ ಮುಳುಗಡೆಗೊಳ್ಳುವ ಖುಷ್ಕಿ ಜಮೀನಿಗೆ ಪ್ರತಿ ಎಕರೆಗೆ 30 ಲಕ್ಷ ರೂ. ಹಾಗೂ ತರಿ ಜಮೀನಿಗೆ ಪ್ರತಿ ಎಕರೆಗೆ 40 ಲಕ್ಷ ರೂ. ಪರಿಹಾರ ನಿಗದಿ.

ತುಂಗಭದ್ರಾ ಅಣೆಕಟ್ಟಿನ ಶಿಥಿಲಗೊಂಡಿರುವ 33 ಗೇಟುಗಳನ್ನು ಬದಲಾಯಿಸಲು ಕ್ರಮ.

ತುಂಗಭದ್ರಾ ನದಿಗೆ ಕೊಪ್ಪಳ ಜಿಲ್ಲೆಯ ನವಲಿ ಬಳಿ ಸಮತೋಲನಾ ಜಲಾಶಯ ನಿರ್ಮಾಣಕ್ಕೆ ಒತ್ತು.

ಮಹದಾಯಿ ಕಣಿವೆಯ ಕಳಸಾ-ಬಂಡೂರಾ ನಾಲಾ ಯೋಜನೆಗಳಡಿ ಕೇಂದ್ರ ಪರಿಸರ ಸಚಿವಾಲಯದಿಂದ ಅರಣ್ಯ ತೀರುವಳಿ ಪಡೆಯಲು ಪ್ರಯತ್ನ.

ಚಾಮರಾಜನಗರದ ಹನೂರು ತಾಲೂಕಿನಲ್ಲಿ ಅಂತರ್ಜಲ ಹೆಚ್ಚಿಸುವ ಮತ್ತು ನೀರಾವರಿ ಒದಗಿಸಲು ಉಡುತೊರೆಹಳ್ಳ ಯೋಜನೆಗೆ 490 ಕೋಟಿ ರೂ. ಅನುದಾನ.

ವಿಜಯಪುರ ಜಿಲ್ಲೆಯ ಬಾಬಾ ನಗರದಲ್ಲಿ ತುಬಚಿ-ಬಬಲೇಶ್ವರ ಏತ ನೀರಾವರಿ ಯೋಜನೆಯಡಿ 0.67 ಟಿ.ಎಂ.ಸಿ ಸಾಮರ್ಥ್ಯದ ಸಂಗ್ರಹಣಾ ಜಲಾಶಯ ನಿರ್ಮಾಣಕ್ಕೆ ಕ್ರಮ.

ಕಾಮಗಾರಿ ಹಂತದಲ್ಲಿರುವ 12 ನೀರಾವರಿ ಯೋಜನೆಗಳು, 22 ಕೆರೆ ತುಂಬುವ ಯೋಜನೆಗಳು ಮತ್ತು ಮೂರು ಆಧುನೀಕರಣ ಯೋಜನೆಗಳನ್ನು ಪೂರ್ಣಗೊಳಿಸಲು ಆದ್ಯತೆ.

ಕೃಷ್ಣಾ, ಕಾವೇರಿ,

3 ನೇ ಪುಟಕ್ಕೆ



ದೇಶದಲ್ಲೇ ಅತಿ ಹೆಚ್ಚು ಬಾರಿ ಬಜೆಟ್ ಮಂಡಿಸಿದ 2ನೇ ಸಿಎಂ ಎನಿಸಿಕೊಂಡ ಸಿದ್ದರಾಮಯ್ಯ

ಬೆಂಗಳೂರು, ಮಾ.6-

ಸಿದ್ದರಾಮಯ್ಯ 17ನೇ ಬಾರಿ ಬಜೆಟ್ ಮಂಡಿಸುವ ಮೂಲಕ ತಮ್ಮದೇ ದಾಖಲೆ ಮುರಿದಿದ್ದಾರೆ. ಈ ಮೂಲಕ ಕರ್ನಾಟಕ ಇತಿಹಾಸದಲ್ಲೆ? ಅತಿ ಹೆಚ್ಚು ಬಾರಿ ಬಜೆಟ್ ಮಂಡಿಸಿದ ನಾಯಕನಾಗಿದ್ದಾರೆ. ಜತೆಗೆ ರಾಷ್ಟ್ರಮಟ್ಟದಲ್ಲಿ 2ನೇ ಸ್ಥಾನದಲ್ಲಿದ್ದಾರೆ.

ಗುಜರಾತ್‌ನ ಬಿಜೆಪಿಯ ಹಿರಿಯ ನಾಯಕ ವಜುಭಾಯಿ ಆರ್ ವಾಲಾ ಅವರು ಅತಿ ಹೆಚ್ಚು ಬಾರಿ ಬಜೆಟ್ ಮಂಡಿಸಿದ್ದರು. ಇವರು 1998 ಮತ್ತು 2012ರ ನಡುವೆ ಒಟ್ಟು 18 ಬಜೆಟ್ ಮಂಡಿಸಿದ್ದರು. ವಾಲಾ

3 ನೇ ಪುಟಕ್ಕೆ

8 ರಂದು ಮಹಿಳಾ ದಿನಾಚರಣೆ, 22 ಜನ ಸಾಧಕಿಯರಿಗೆ ಪ್ರಶಸ್ತಿ ಪ್ರದಾನ: ಕಲಾವತಿ ಇವರಿಂದ ಸಂಗೀತ



ರಾಯಚೂರು,ಮಾ.6-

ಕಲಾ ಸಂಕುಲ ಸಂಸ್ಥೆ ಹಾಗೂ ಕಲ್ಯಾಣ ಕರ್ನಾಟಕ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಟ್ರಸ್ಟ್ ರಾಯ ಚೂರು ಇವರ ಸಹಯೋಗದಲ್ಲಿ ಇದೇ 8 ರವಿವಾರ ರಂದು ಸಂಜೆ 6:00 ಗಂಟೆಗೆ ರಾಯಚೂರು ನಗರದ ರಂಗಮಂದಿರದಲ್ಲಿ ಅಂತರಾಷ್ಟ್ರೀ ಯ ಮಹಿಳಾ ದಿನಾಚರಣೆ, ಸಂಗೀತ ಮತ್ತು ಸಾಧಕರಿಗೆ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ. ಎಂದು ಕಲಾ ಸಂಕುಲಾ ಸಂಸ್ಥೆಯ ಕಾರ್ಯದರ್ಶಿ ತಿಳಿಸಿದರು.

ಅವರಿಂದು ಪತ್ರಿಕಾ ಗೋಷ್ಠಿ ಯಲ್ಲಿ ಮಾತನಾಡಿ ಅಂತರಾಷ್ಟ್ರೀಯ ಖ್ಯಾತ ಗಾಯಕಿ ಕನ್ನಡದ ಕೋಗಿಲೆ ಉಡುಪಿಯ ದಯಾನಂದ ಅವರಿಂದ ಸಂಗೀತ ಕಾರ್ಯಕ್ರಮ ನಡೆಯ ಲಿದೆ. ನವದೆಹಲಿಯಲ್ಲಿ ಮೆಟ್ರೋ ರೈಲನ್ನು ನಡೆಸಿದ ಮೊದಲ ಕನ್ನಡತಿ ಆಶಾಲತಾ ನವದೆಹಲಿ ಇವರಿಗೆ ರಾಷ್ಟ್ರ ಮಟ್ಟದ ಮಹಿಳಾ ಸಾಧಕಿ ಪ್ರಶಸ್ತಿ ನೀಡಲಾಗುವುದು. ಇವರೊಂದಿಗೆ 21 ಜನ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಜಿಲ್ಲೆ ಮತ್ತು ಹೊರ ಜಿಲ್ಲೆಯ ಮಹಿಳೆಯರಿಗೆ ಮಹಿಳಾ ಸಾಧಕಿ ಪ್ರಶಸ್ತಿ ನೀಡಿ ಗೌರವಿಸಲಾ ಗುವುದು.

ಈ ಸಮಾರಂಭದ ದಿವ್ಯ ಸಾನಿ ಧ್ಯವನ್ನು ಶ್ರೀ ಜ್ಞಾನನಂದ ಮಹಾ ರಾಜ ಶಿವಾನಂದ ಮಠ ಮಟವಾರಿ ಇವರು ವಹಿಸಲಿದ್ದಾರೆ. ಮಾಜಿ ಸಚಿವರಾದ ಕೆ. ಶಿವನಗೌಡ ನಾಯಕ ಸಮಾರಂಭವನ್ನು ಉದ್ಘಾಟಿಸಲಿ ದ್ದಾರೆ. ವಿಧಾನ ಪರಿಷತ್ ಸದಸ್ಯರು, ಕೆಪಿಸಿಸಿ ಕಾರ್ಯಾಧ್ಯಕ್ಷರಾದ ಎ. ವಸಂತಕುಮಾರ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ನಗರಸಭೆ ಮಾಜಿ ಉಪಾಧ್ಯಕ್ಷರಾದ ಕೆ. ಪಂಪಾಪತಿ, ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಕಾರ್ಯದರ್ಶಿಗಳಾದ ಶ್ರೀದೇವಿ ಆರ್.ವಿ. ನಾಯಕ್, ಕೆಪಿಸಿಸಿ ಕಾರ್ಯದರ್ಶಿ ಕೆ. ಆಸ್ಲಾಂ ಪಾಶಾ, ಫಾತಿಮಾ ಹುಸೇನ್, ಅನಿತಾ ಹಿರೇಮನಿ,ಅದಿಕ್ಷಕರು ಜಿಲ್ಲಾ ಕಾರಾಗೃಹ ಇಲಾಖೆ ಕಲ್ಯಾಣ ಕರ್ನಾಟಕ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಟ್ರಸ್ಟಿನ ಗೌರವಾಧ್ಯಕ್ಷರಾದ ಬಿ. ಬಸವರಾಜ್, ಗೌರವ ಸಲಹೆಗಾರ ರಾಜಶೇಖರ ದಿನ್ನಿ, ಅಧ್ಯಕ್ಷರಾದ ಕೆ. ಅಯ್ಯಣ್ಣ ವಡವಾಟಿ, ಪ್ರಧಾನ ಕಾರ್ಯದರ್ಶಿಗಳಾದ ಡಿ. ಶ್ರೀನಿವಾಸ, ಉಪಾಧ್ಯಕ್ಷರಾದ ಸಂಗಮೇಶ ಬಂಢಾರಿ, ಬಿ. ಜಗದೀಶ, ನರಸಿಂಹಲು ತೋರ್ಸಿ ಇವರುಗಳು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಈ ಸಮಾರಂಭದ ಅಧ್ಯಕ್ಷತೆಯನ್ನು ಕಲಾ ಸಂಕುಲ ಸಂಸ್ಥೆಯ ಅಧ್ಯಕ್ಷರಾದ ರೇಖಾ ಬಡಿಗೇರ್ ವಹಿಸಲಿದ್ದಾರೆ.

ಈ ಪತ್ರಿಕಾ ಗೋಷ್ಠಿಯಲ್ಲಿ ಕಲ್ಯಾಣ ಕರ್ನಾಟಕ

3 ನೇ ಪುಟಕ್ಕೆ

ರಾಯಚೂರಿನಲ್ಲಿ ''ನಶಾ ಮುಕ್ತ ಭಾರತ ಯುವ ಶುದ್ಧಿ ಅಭಿಯಾನ ವಾಕಥಾನ್'' ಭವ್ಯ ಯಶಸ್ಸು





ರಾಯಚೂರು,ಮಾ.6-

ಯುವಕರಲ್ಲಿ ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸಿ ಆರೋಗ್ಯ ಕರ ಸಮಾಜ ನಿರ್ಮಿಸುವ ಉದ್ದೇಶ ದಿಂದ ನಗರದ ಎಸ್.ಪಿ. ಪರೇಡ್ ಮೈದಾನದಲ್ಲಿ ಶುಕ್ರವಾರ ''ನಶಾ ಮುಕ್ತ ಭಾರತ ಯುವ ಶುದ್ಧಿ ಅಭಿಯಾನ ವಾಕಥಾನ್'' ಕಾರ್ಯಕ್ರಮ ಭವ್ಯವಾಗಿ ನಡೆಯಿತು. ಸಾವಿರಾರು ವಿದ್ಯಾರ್ಥಿಗಳು ಪಾಲ್ಗೊಂಡು ಮಾದಕ ವಸ್ತುಗಳ ವಿರುದ್ಧ ಜಾಗೃತಿ ಮೂಡಿಸುವ ಬಲವಾದ ಸಂದೇಶ ನೀಡಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಸಂಯೋಜಿತ ರಾಯಚೂರು ಜಿಲ್ಲಾ ವ್ಯಾಪ್ತಿಯ ಕಾಲೇಜುಗಳ ಸಂಘ, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ದಿಶಾ ಭೋದ್ ಫೌಂಡೇಶನ್ ಹಾಗೂ ಭಾರತ ಸರ್ಕಾರದ ಗೃಹ ಸಚಿವಾಲಯದ ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋ ಇವರ ಸಹಯೋಗದಲ್ಲಿ ಈ ಕಾರ್ಯಕ್ರಮವನ್ನು ಆಯೋಜಿ ಸಲಾಗಿತ್ತು.

ಮಂತ್ರಾಲಯದ ಶ್ರೀ ರಾಘವೇಂದ್ರಸ್ವಾಮಿ ಮಠದ ಪೀಠಾಧಿಪತಿಗಳಾದ ಪರಮಪೂಜ್ಯ 108 ಶ್ರೀ ಶ್ರೀ ಸುಬುಧೇಂದ್ರ ತೀರ್ಥ ರು ಸಸಿಗೆ ನೀರು ಹಾಕುವ ಮೂಲಕ ವಾಕಥಾನ್‌ಗೆ ಚಾಲನೆ ನೀಡಿದರು.

ಆಶೀರ್ವಚನ ನೀಡಿದ ಶ್ರೀಗಳು, ಇಂದಿನ ಯುವ ಪೀಳಿಗೆ ದೇಶದ ಭವಿಷ್ಯವಾಗಿದ್ದು ಸಮಾಜ ವನ್ನು ಸುದೃಢವಾಗಿ ಕಟ್ಟುವ ಜವಾಬ್ದಾರಿ ಯುವಕರ ಮೇಲಿದೆ ಎಂದು ಹೇಳಿದರು. ಮಾದಕ ವಸ್ತುಗಳಂತಹ ಕೆಟ್ಟ ಅಭ್ಯಾಸಗಳಿಂದ ದೂರವಿದ್ದು ಆರೋಗ್ಯಕರ ಹಾಗೂ ಸಂಸ್ಕಾರವಂತ ಸಮಾಜ ನಿರ್ಮಾಣಕ್ಕೆ ಎಲ್ಲರೂ ಕೈಜೋಡಿಸಬೇಕು ಎಂದು ಕರೆ ನೀಡಿದರು. ಜೊತೆಗೆ ಅಂಗಾಂಗ ದಾನ ಮತ್ತು ರಕ್ತದಾನದಂತಹ ಮಹತ್ವದ ಸೇವೆಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಿ ಇತರರ ಜೀವ ಉಳಿಸುವ ಮಹಾದಾನದಲ್ಲಿ ಪ್ರತಿಯೊಬ್ಬರೂ ಮುಂದಾಗಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದ ಆರಂಭದಲ್ಲಿ ಪ್ರಸ್ತಾವಿಕವಾಗಿ ಮಾತನಾಡಿದ ಡಾ. ಭಗವಾನ್ ಬಿ.ಸಿ., ಯುವಕರನ್ನು ಮಾದಕ ವಸ್ತುಗಳಿಂದ ದೂರವಿರಿಸಿ ಆರೋಗ್ಯಕರ ಜೀವನಶೈಲಿಯನ್ನು ರೂಢಿಸಿಕೊಳ್ಳುವಂತೆ ಜಾಗೃತಿ ಮೂಡಿಸುವುದು ಈ ಅಭಿಯಾನದ ಮುಖ್ಯ ಉದ್ದೇಶವಾಗಿದೆ ಎಂದು ಹೇಳಿದರು. ಈ ವೇಳೆ ವಿದ್ಯಾರ್ಥಿಗಳಿಂದ ನಶಾಮುಕ್ತ ಸಮಾಜ ನಿರ್ಮಾಣದ ಪ್ರತಿಜ್ಞಾವಿಧಿಯನ್ನೂ ಸ್ವೀಕರಿಸಲಾಯಿತು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಪತಿ ಡಾ. ಭಾರ್ಗವ್ ಮಾತನಾಡಿ, ವಿಶ್ವವಿದ್ಯಾಲಯವು ಮೂರು ದಶಕಗಳಿಂದ ಕಾರ್ಯನಿರ್ವಹಿಸುತ್ತಿದ್ದು 500ಕ್ಕೂ ಹೆಚ್ಚು

ಕಲಬುರಗಿ ಐಟಿಎಫ್ ಮಹಿಳಾ ಟೆನಿಸ್ ಟೂರ್ನಿ : ಕ್ವಾರ್ಟರ್ ಫೈನಲ್‌ಗೆ ವೈಷ್ಣವಿ ಅಡ್ಕರ್, ಅಂಕಿತಾ ರೈನಾ

ಕಲಬುರಗಿ,ಮಾ.06-

ಇಲ್ಲಿನ ಚಂದ್ರಶೇಖರ್ ಪಾಟೀಲ್ ಕ್ರಿ?ಡಾಂಗಣದಲ್ಲಿ ಗುರುವಾರ ನಡೆದ ಐಟಿಎಫ್ ಮಹಿಳಾ ಸಿಂಗಲ್ಸ್ ನಲ್ಲಿ ಭಾರತದ ಆಟಗಾರ್ತಿಯರಾದ ವೈಷ್ಣವಿ ಅಡ್ಕರ್ ಮತ್ತು ಅಂಕಿತಾ ರೈನಾ ಅದ್ಬುತ ಪ್ರದರ್ಶನ ನೀಡಿ, ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ.

ಸಿಂಗಲ್ಸ್ ಸೆಕೆಂಡ್ ರೌಂಡ್ಸ್ : ಸಿಂಗಲ್ಸ್ ಎರಡನೇ ಸುತ್ತಿನಲ್ಲಿ ಮೂರನೇ ಶ್ರೆ?ಯಾಂಕಿತ ವೈಷ್ಣವಿ ಅಡ್ಕರ್ 6-2, 6-0 ಸೆಟ್‌ಗಳಿಂದ ಅನ್ನಾ ಸೀದಿಶೇವಾ ಅವರನ್ನು ಮಣಿಸಿದರು. ಆರನೇ ಗೇಮ್‌ನಲ್ಲಿ ಅಡ್ಕರ್ ಮೂರು ಬ್ರೆ?ಕ್ ಪಾಯಿಂಟ್‌ಗಳನ್ನು ಸೃಷ್ಟಿಸಲು ತೀಕ್ಷ್ಣ ರಿಟರ್ನ್‌ಗಳೊಂದಿಗೆ ಒತ್ತಡ ಹೇರಿ ಎದುರಾಳಿಗೆ ಪರಾಭವಗೊಳಿಸಿದರು.

ಎಂಟನೇ ಶ್ರೆಯಾಂಕಿತ ಅಂಕಿತಾ ರೈನಾ 6-2, 6-1 ಸೆಟ್‌ಗಳಿಂದ ಮಿಲಾನಾ ಮಸ್ಲೆಂಕೋವಾ ಅವರ ವಿರುದ್ಧ ನೇರ ಸೆಟ್ ಗಳಿಂದ ಗೆದ್ದು ಬೀಗಿದರು. ಇನ್ನೊಂದೆಡೆ, ಎಲಿನಾ ನೆಪ್ಲಿ ಅವರು ಐದನೇ ಶ್ರೆ?ಯಾಂಕದ ಝೀಲ್ ದೇಸಾಯಿ ಅವರನ್ನು 7-6 (3), 6-3 ಸೆಟ್‌ಗಳಿಂದ ಮಣಿಸಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದರು. ಅಗ್ರ ಶ್ರೆ?ಯಾಂಕಿತ ಆಟಗಾರ್ತಿ ಜಾಸ್ಮಿನ್ ಗಿಂಬ್ರೆರೆ 7-5, 7-5 ಸೆಟ್ ಗಳಿಂದ ಇವಾ ಮೇರಿ ಡೆಸ್ವಿಗ್ನೆಸ್ ಅವರನ್ನು ಸೋಲಿಸಿದರು, ಎರಡನೇ ಶ್ರೆ?ಯಾಂಕದ ಅಂಚಿಸಾ ಚಾಂಟಾ ಅವರು 6-3, 6-3 ಸೆಟ್‌ಗಳಿಂದ ಪೊಲಿನಾ ಕುಹರೆಂಕೊ ವಿರುದ್ಧ ಜಯ ಸಾಧಿಸಿದರು.



ಆರನೇ ಶ್ರೆ?ಯಾಂಕದ ಥಾಸಪೋರ್ನ್ ನಕ್ಲೊ 6-3, 6-0 ಸೆಟ್‌ಗಳಿಂದ ಸೋಫಿಯಾ ಮಾರ್ಟಿಯಾನೊವಾ ಅವರನ್ನು ಪರಾಭವಗೊಳಿಸಿದರೆ, ಮಾಯಾನ್ ಲಾರೋನ್ 6-3, 6-1 ಸೆಟ್‌ಗಳಿಂದ ಏಳನೇ ಶ್ರೆ?ಯಾಂಕಿತ ಮಿಚಿಕಾ ಒಜೆಕಿ ಅವರನ್ನು ಸೋಲಿಸಿದರು. ಇದೇ ವೇಳೆ ಎವ್ಗೆನಿಯಾ ಬುರ್ಡಿನಾ 7-6 (1), 6-2 ಸೆಟ್‌ಗಳಿಂದ ಸೋಫಿಯಾ ಸುಸ್ಲೊ?ವಾ ಅವರನ್ನು ಪರಾಭವಗೊಳಿಸಿದರು.

ಡಬಲ್ಸ್ ಕ್ವಾರ್ಟರ್ ಫೈನಲ್ ಫಲಿತಾಂಶ :

ಮಹಿಳೆಯರ ಡಬಲ್ಸ್ ಕ್ವಾರ್ಟರ್ ಫೈನಲ್‌ನಲ್ಲಿ ಭಾರತದ ಸೋನಾಲ್ ಪಾಟೀಲ್ ಮತ್ತು ಬೇಲಾ ತಮ್ಹಾಂಕರ್ ಜೋಡಿ 7-5, 6-2 ಸೆಟ್‌ಗಳಿಂದ ಕರ್ನಾಟಕದ ಸ್ನಿಗ್ಧ ಕಾಂತಾ ಮತ್ತು ಹರ್ಷಿಣಿ ಎನ್.ನಾಗರಾಜ್ ಅವರನ್ನು ಮಣಿಸಿ ಸೆಮಿಫೈನಲ್ ಪ್ರವೇಶಿಸಿತು.

ದ್ವಿತೀಯ ಶ್ರೆ?ಯಾಂಕದ ವೈಷ್ಣವಿ ಅಡ್ಕರ್ ಮತ್ತು ಅಂಕಿತಾ ರೈನಾ 6-2, 6-2 ಸೆಟ್‌ಗಳಿಂದ ಎವ್ಗೆನಿಯಾ ಬುರ್ಡಿನಾ ಮತ್ತು ಸೋಫಿಯಾ ಮಾರ್ಟಿಯಾನೊವಾ ಅವರನ್ನು ಮಣಿಸಿದರು.

ಮತ್ತೊಂದು ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಶ್ರವ್ಯಾ ಶಿವಾನಿ ಚಿಲಕಲಪುಡಿ ಮತ್ತು ಮಿಚಿಕಾ ಒಜೆಕಿ ಜೋಡಿ 7-5, 2-6, 10-6 ಸೆಟ್‌ಗಳಿಂದ ಮೂರನೇ ಶ್ರೆ?ಯಾಂಕದ ಜೀಲ್ ದೇಸಾಯಿ ಮತ್ತು ಎಲಿನಾ ನೆಪ್ಲಿ ಜೋಡಿಯನ್ನು ಸೋಲಿಸಿದರು.

ಕರ್ನಾಟಕದ ಸೋಹಾ ಸಾದಿಕ್, ಆಕಾಂಕ್ಷಾ ದಿಲೀಪ್ ನಿಟ್ಟುರೆ ಜೊತೆಗೂಡಿ ಮೊದಲ ಶ್ರೇಯಾಂಕದ ಶ್ರೀವಲ್ಲಿ ಭಮಿದ್ಪತಿ ಮತ್ತು ಜಾಸ್ಮಿಜನ್ ಗಿಂಬ್ರೆರೆ ವಿರುದ್ಧ 2-6, 7-5 12-10 ಅಂತರದಲ್ಲಿ ಜಯಗಳಿಸಿ ಡಬಲ್ಸ್ ವಿಭಾಗದಲ್ಲಿ ಸೆಮಿಫೈನಲ್‌ಗೆ ಪ್ರವೇಶಿಸಿದರು.

ಅಮೇರಿಕಾಇಸ್ರೇಲ್ ಯುದ್ಧ ನೀತಿಗೆ ಖಂಡನೆ: ಕಲಬುರಗಿಯಲ್ಲಿ ಎಡಪಕ್ಷಗಳ ಪ್ರತಿಭಟನೆ

ಕಲಬುರಗಿ,ಮಾ.06-

ನಗರದ ತಿಮ್ಮಾಪುರಿ ವೃತ್ತದಲ್ಲಿ ಭಾರತ ಕಮ್ಯುನಿಸ್ಟ್ ಪಕ್ಷ (ಸಿಪಿಐ), ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸವಾದಿ) ಹಾಗೂ ಸೋಷಿಯಲಿಸ್ಟ್ ಯುನಿಟಿ ಸೆಂಟರ್ ಆಫ್ ಇಂಡಿಯಾ (ಕಮ್ಯುನಿಸ್ಟ್) ಕಲಬುರಗಿ ಜಿಲ್ಲಾ ಸಮಿತಿಗಳ ನೇತೃತ್ವದಲ್ಲಿ ಅಮೇರಿಕಾ ಮತ್ತು ಇಸ್ರೇಲ್‌ನ ಯುದ್ಧಖೋರ ನೀತಿಯನ್ನು ಖಂಡಿಸಿ, ಗುರುವಾರ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನಾಕಾರರು ಅಮೇರಿಕಾ ಸಾಮ್ರಾಜ್ಯಶಾಹಿಯ ಬೆಂಬಲದೊಂದಿಗೆ ಇಸ್ರೇಲ್ ಇರಾನ್ ಮೇಲೆ ನಡೆಸಿದ ದಾಳಿಯನ್ನು ತೀವ್ರವಾಗಿ ಖಂಡಿಸಿದರು. 'ಮುನ್ನೆಚ್ಚರಿಕೆಯ ದಾಳಿ' ಎಂಬ ಆಧಾರರಹಿತ ಕಾರಣ ನೀಡಿ ನಡೆದ ಈ ದಾಳಿ ಜಗತ್ತಿನಲ್ಲಿ ಯುದ್ಧದ ಭೀತಿಯನ್ನು ಹೆಚ್ಚಿಸುತ್ತಿದೆ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಇದೇ ವೇಳೆಯಲ್ಲಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹಾಗೂ ಅಮೇರಿಕಾ ಮಾಜಿ ಅಧ್ಯಕ್ಷ ಡೋನಾಲ್ಡ್ ಟ್ರಂಪ್ ಅವರ ಪ್ರತಿಕೃತಿಗಳನ್ನು ದಹಿಸಿ ಆಕ್ರೋಶ ವ್ಯಕ್ತಪಡಿಸಲಾಯಿತು. ಯುದ್ಧ ಬೇಡ, ಶಾಂತಿ ಬೇಕು ಎಂದು ಘೋಷಣೆ ಕೂಗಿದರು.

ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಸಿಪಿಐ ಜಿಲ್ಲಾ ಕಾರ್ಯದರ್ಶಿ ಕಾ. ಮಹೇಶ್ ರಾಠೋಡ್ ಅವರು,

''ಅಮೇರಿಕನ್ ಸಾಮ್ರಾಜ್ಯಶಾಹಿ ವಿವಿಧ ದೇಶಗಳ ಸಾರ್ವಭೌಮತ್ವದ ಮೇಲೆ ಸೇನಾ ಹಸ್ತಕ್ಷೇಪ ಮಾಡಿ ನಾಗರಿಕರ ಮೇಲೆ ದಾಳಿ ನಡೆಸುತ್ತಿದೆ. ಮಕ್ಕಳನ್ನೂ ಗುರಿಯಾಗಿಸಿಕೊಂಡು ನಡೆದ ದಾಳಿಯಲ್ಲಿ ನೂರಾರು ಮಕ್ಕಳು ಸಾವನ್ನಪ್ಪಿದ್ದಾರೆ. ಈ ರೀತಿಯ ಆಕ್ರಮಣಕಾರಿತ್ವವನ್ನು ಜಗತ್ತಿನಾದ್ಯಂತ ಖಂಡಿಸಲಾಗುತ್ತಿದೆ. ಕೂಡಲೇ ಯುದ್ಧ ನಿಲ್ಲಬೇಕು,'' ಎಂದು ಆಗ್ರಹಿಸಿದರು. ಎಸ್‌ಯುಸಿಐ (ಸಿ) ಜಿಲ್ಲಾ ಮುಖಂಡರಾದ ಕಾ.ನಾಗಮ್ಮಾಳ ಮಾತನಾಡಿದರು.



ಸಿಪಿಐಎಂ ಜಿಲ್ಲಾ ಕಾರ್ಯದರ್ಶಿ ಕೆ.ನೀಲಾ ಮಾತನಾಡಿ, ''ಜಗತ್ತಿನಲ್ಲಿ ನಡೆಯುತ್ತಿರುವ ಯುದ್ಧ ರಾಜಕಾರಣ ಮಾನವೀಯತೆಯ ವಿರುದ್ಧವಾಗಿದೆ. ಭಾರತ ಸರ್ಕಾರವು ಅಲಿಪ್ತ ವಿದೇಶಾಂಗ ನೀತಿಯನ್ನು ಅನುಸರಿಸಬೇಕು. ಆದರೆ ಇಸ್ರೇಲ್ ಪರ ನಿಲುವು ತಾಳಿರುವುದು ದೇಶದ ಗೌರವಕ್ಕೆ ಧಕ್ಕೆಯಾಗಿದೆ,'' ಎಂದು ಅಭಿಪ್ರಾಯಪಟ್ಟರು. ಭಾರತವು ಇಸ್ರೇಲ್‌ನೊಂದಿಗೆ ಇರುವ ರಾಜತಾಂತ್ರಿಕ ಸಂಬಂಧಗಳನ್ನು ಪುನರ್‌ಪರಿಶೀಲಿಸಬೇಕು ಎಂದು ಅವರು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ವಿ.ನಾಗಮ್ಮಾಳ, ಭೀಮಾಶಂಕರ್ ಮಾಡ್ಯಾಳ, ಭೀಮಶೆಟ್ಟಿ ಯಂಪಳ್ಳಿ, ಶ್ರೀಮಂತ ಬಿರಾದಾರ, ಪ್ರಭುದೇವ ಯಳಸಂಗಿ, ಎಸ್.ಎಂ. ಶರ್ಮ, ಮಹೇಶ್ ಎಸ್.ಬಿ., ಡಾ. ಸೀಮಾ ದೇಶಪಾಂಡೆ, ಲವಿತ್ರ ವಸ್ತದ್, ಪಾಂಡುರಂಗ ಮಾವಿನಕರ್, ಶಾಂತಾ ಘಂಟಿ, ಕೋದಂಡರಾಮಪ್ಪ ಸೇರಿದಂತೆ ಹಲವರು ಭಾಗವಹಿಸಿದ್ದರು.

ಕ್ರೀಡೆಗಳ ಮೂಲಕ ಬೆಳೆಕಿಗೆ ಬನ್ನಿ : ಅಬ್ದುಲ್ ರಜಾಕ್

ಕೊಪ್ಪಳ,ಮಾ.06-

ಕ್ರೀಡೆಗಳ ಮೂಲಕ ವಿದ್ಯಾರ್ಥಿಗಳು ಬೆಳಕಿಗೆ ಬರಬೇಕು ಎಂದು ಭಾರತೀಯ ಪೆಂಕಾಕ್ ಸೀಲಾತ್ ಸಂಸ್ಥೆಯ ತಾಂತ್ರಿಕ ನಿರ್ದೇಶಕರಾದ ಅಬ್ದುಲ್ ರಾಜಾಕ್ ಹೇಳಿದರು.

ನಗರದ ಜಿಲ್ಲಾ ಕ್ರೀಡಾಂಗಣ ದಲ್ಲಿ ಗುರುವಾರ, ಕೊಪ್ಪಳದ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು ಹಾಗೂ ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ ಇವರ ಸಹಯೋಗದಲ್ಲಿ 2025-26ನೇ ಸಾಲಿನ ಅಂತರ ಮಹಾವಿದ್ಯಾನಿಲಯಗಳ ಪೆಂಕಾಕ್ ಸೀಲಾತ್ ಪಂದ್ಯಾವಳಿ ಮತ್ತು ವಿಶ್ವವಿದ್ಯಾಲಯ ತಂಡದ ಆಯ್ಕೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದು ಕ್ರೀಡಾ ಕ್ಷೇತ್ರದಲ್ಲಿ ಹೆಚ್ಚಿನ ಸ್ಪರ್ಧೆ ಇದ್ದರೂ ಪೆಂಕಾಕ್ ಸೀಲಾತ್ ಕ್ರೀಡೆಯಲ್ಲಿ ಸ್ಪರ್ಧೆ ಕಡಿಮೆ ಇದೆ. ಉತ್ತಮ ಪ್ರದರ್ಶನ ನೀಡಿದರೆ ಬಹುಮಾನ ಗಳಿಸುವ ಅವಕಾಶಗಳು ಹೆಚ್ಚು. ಸರ್ಕಾರದಿಂದ ಕ್ರೀಡೆಗಳಿಗೆ ದೊರೆಯುವ ಅನುದಾನವನ್ನು ಸದುಪಯೋಗ ಪಡಿಸಿಕೊಂಡು ಕ್ರೀಡೆಗಳ ಮೂಲಕ ಬೆಳವಣಿಗೆ ಸಾಧಿಸಬೇಕು ಎಂದು ಅವರು ಸಲಹೆ ನೀಡಿದರು.



ಮುಖ್ಯ ಅತಿಥಿಯಾಗಿ ಭಾಗವಹಿಸಿದ ಪ್ರೊ. ಅಲ್ಲಮ ಪ್ರಭು ಬೆಟ್ಟದೂರು ಮಾತನಾಡಿ, ಗ್ರಾಮೀಣ ಕ್ರೀಡೆಗಳನ್ನು ಉಳಿಸಿ ಬೆಳೆಸುವ ಅಗತ್ಯವಿದೆ. ಗೆಲುವು-ಸೋಲು ಮುಖ್ಯವಲ್ಲ, ಕ್ರೀಡೆಯಲ್ಲಿ ಪಾಲ್ಗೊಳ್ಳುವುದೇ ಮುಖ್ಯ. ವಿದ್ಯಾರ್ಥಿಗಳು ಕಲೆ, ಸಾಹಿತ್ಯ, ಸಂಗೀತ ಮತ್ತು ಕ್ರೀಡೆಗಳತ್ತ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಸಂಘಟನಾ ಕಾರ್ಯದರ್ಶಿ ಹಾಗೂ ದೈಹಿಕ ಶಿಕ್ಷಣ ಉಪನ್ಯಾಸಕರಾದ ಪ್ರದೀಪ್ ಕುಮಾರ ಮಾತನಾಡಿ, ಕ್ರೀಡೆಗಳಲ್ಲಿ ಭಾಗವಹಿಸುವ ಮೂಲಕ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಸಿಗುತ್ತದೆ. ಸರ್ಕಾರಿ ಹುದ್ದೆಗಳಲ್ಲಿ ಕ್ರೀಡಾ ಮೀಸಲಾತಿ ಸೌಲಭ್ಯ ಇರುವುದರಿಂದ ಅದನ್ನು ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಳ್ಳಬೇಕು. ಕ್ರೀಡೆಗಳು ಮಾನಸಿಕ, ದೈಹಿಕ ಮತ್ತು ಆರ್ಥಿಕ ಸದೃಢತೆಗೆ ಸಹಕಾರಿಯಾಗುತ್ತವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ. ಗಣಪತಿ ಲಮಾಣಿ ಮಾತನಾಡಿ, ವಿದ್ಯಾರ್ಥಿಗಳು ಹೊಸ ಕ್ರೀಡೆಗಳಲ್ಲಿ ಆಸಕ್ತಿಯಿಂದ ಪಾಲ್ಗೊಳ್ಳಬೇಕು. ಆಧುನಿಕ ಕಾಲದಲ್ಲಿ ಕ್ರೀಡೆಗಳು ಆರೋಗ್ಯ ವೃದ್ಧಿಗೆ ಅತ್ಯಂತ ಅಗತ್ಯವೆಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಬಿ. ಜಿ ಕರಿಗಾರ, ವಿಠಲ ಬಿ ಜಾಬ ಗೌಡರ್, ಎ ಬಸವರಾಜ, ಮಂಜುನಾಥ್ ಅರೇಂಟುನೂರು, ಗವಿಸಿದ್ದಪ್ಪ ಮುತ್ತಾಳ, ಮಂಜುನಾಥ್ ಗೊಂಡ ಬಾಳು, ವಿನೋದು, ವಿಶ್ವನಾಥ್ ನಡುಕಟ್ಟಿ, ಶುಭ, ಸುಮಿತ್ರಾ ಹಾಗೂ ಸುಮಯ್ಯ ಇತರರು ಉಪಸ್ಥಿತರಿ ದ್ದರು.

ಕಾರ್ಯಕ್ರಮವನ್ನು ಡಾ. ಹುಲಿಗೆಮ್ಮ ಅವರು ನಿರೂಪಿಸಿದರು. ಡಾ. ನರಸಿಂಹ ಸ್ವಾಗತಿಸಿ ವಂದಿಸಿದರು. ಕಾಲೇಜಿನ ವಿದ್ಯಾರ್ಥಿನಿಯರು ಪ್ರಾರ್ಥನೆ ಗೀತೆ ಹಾಡಿದರು.

ಸರ್ಕಾರಿ ಆದರ್ಶ ವಿದ್ಯಾಲಯ: ಮಾ.23 ರಂದು ಪ್ರವೇಶ ಪರೀಕ್ಷೆ

ಬಳ್ಳಾರಿ,ಮಾ.05 -

ನಗರದ ಹಿರಾಳ್ ಕುಡಂ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ 2026-27ನೇ ಸಾಲಿನಲ್ಲಿ 6ನೇ ತರಗತಿ ದಾಖಲಾತಿಗಾಗಿ ವಿದ್ಯಾರ್ಥಿಗಳಿಂದ ಈಗಾಗಲೇ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಲು ಆಹ್ವಾನಿಸಲಾಗಿದ್ದು, ಪ್ರವೇಶ ಪರೀಕ್ಷೆ ಮಾ.15 ರಂದು ನಿಗದಿಯಾಗಿತ್ತು. ಬದಲಾಗಿ ಮಾ.22 ರಂದು ಭಾನುವಾರ ನಡೆಸಲು ನಿಗದಿಪಡಿಸಲಾಗಿದೆ ಎಂದು ಪ್ರಾಚಾರ್ಯರು ತಿಳಿಸಿದ್ದಾರೆ.

★ಪರೀಕ್ಷಾ ಕೇಂದ್ರಗಳು:★ ಸೆಂಟ್ ಜೋಸಫ್ ಬಾಲಕರ ಮತ್ತು ಬಾಲಕಿಯರ ಪ್ರೌಢಶಾಲೆ ಮತ್ತು ನಂದಿ ಪ್ರೌಢ ಶಾಲೆಗಳಲ್ಲಿ ಪ್ರವೇಶ ಪರೀಕ್ಷೆ ನಡೆಯಲಿವೆ. ಆನ್ ಲೈನ್‌ನಲ್ಲಿ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಂಡು ಹಾಜರಾಗಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಮೊ.97 407 38762 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಸಿರುಗುಪ್ಪ ತಾಲೂಕಿನಲ್ಲಿ ಬಿಜೆಪಿಯಿಂದ ಜನಜಾಗೃತಿ ಪಾದಯಾತ್ರೆ

ಬಳ್ಳಾರಿ,ಮಾ.06-

ತಾಲೂಕಿನ ಹಚ್ಚೊಳ್ಳಿ ಹಾಗೂ ಅಗಸನೂರು ಗ್ರಾಮಗಳಲ್ಲಿ ಭಾರತೀಯ ಜನತಾ ಪಕ್ಷ ತಾಲೂಕು ಘಟಕದ ವತಿಯಿಂದ ''ವಿಕಸಿತ ಭಾರತ'' ಹಾಗೂ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ (ಒಉಓಖಇಉಂ) ಕುರಿತು ಜನಜಾಗೃತಿ ಮೂಡಿಸಲು ಪಾದಯಾತ್ರೆ ಹಮ್ಮಿಕೊಳ್ಳಲಾಯಿತು.

ಈ ಪಾದಯಾತ್ರೆಗೆ ಮಾಜಿ ಸಚಿವ ಬಿ. ಶ್ರೀರಾಮುಲು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾಜಿ ಶಾಸಕ ಎಂ.ಎಸ್. ಸೋಮಲಿಂಗಪ್ಪ, ಬಳ್ಳಾರಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಅನಿಲ್ ನಾಯ್ಡು, ಸಿರುಗುಪ್ಪ ತಾಲೂಕು ಅಧ್ಯಕ್ಷ ಕೆ. ಮಲ್ಲಿಕಾರ್ಜುನ ಸ್ವಾಮಿ, ಎಸ್‌ಟಿ ಮೋರ್ಚಾ ಜಿಲ್ಲಾ ಅಧ್ಯಕ್ಷ ದರಪ್ಪ ನಾಯಕ, ಯುವ ಮೋರ್ಚಾ ಜಿಲ್ಲಾ ಅಧ್ಯಕ್ಷ ಎಂ.ಎಸ್. ಸಿದ್ದಪ್ಪ, ರೈತ ಮೋರ್ಚಾ ಅಧ್ಯಕ್ಷ ವೀರನಗೌಡ ಸೇರಿದಂತೆ ಹಲವಾರು ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು. ಹಚ್ಚೊಳ್ಳಿ ಗ್ರಾಮದ ಬಸ್ ನಿಲ್ದಾಣದಿಂದ ಮಾರೆಮ್ಮ ದೇವಿ ದೇವಸ್ಥಾನದವರೆಗೆ ಪಾದಯಾತ್ರೆ ನಡೆಯಿತು. ಅಗಸನೂರು ಗ್ರಾಮದಲ್ಲಿ ಜಗನ್ನಾಥ್ ರೆಡ್ಡಿ ಅವರ ಮನೆಯಿಂದ ಶೇಷಮ್ಮ ಕಟ್ಟೆವರೆಗೆ ಜನಜಾಗೃತಿ ಪಾದಯಾತ್ರೆ ನಡೆಸಲಾಯಿತು.

ಈ ಪಾದಯಾತ್ರೆಯಲ್ಲಿ ಎಂ.ಆರ್. ಗೌಡ, ಎಂ. ವೀರೇಶ್, ಶಿವರಾಮಗೌಡ, ದೊಡ್ಡ ಹುಲಗಪ್ಪ, ಹನುಮಂತರೆಡ್ಡಿ, ಶೇಖರಗೌಡ, ಸಿದ್ದಯ್ಯ ಸ್ವಾಮಿ, ಶರಣಬಸವ, ವೀರೇಂದ್ರ, ಅಯ್ಯಪ್ಪ, ರಾಮನಾಯಕ, ಚಿದಾನಂದಗೌಡ, ಮೋಹನ್ ರೆಡ್ಡಿ, ಮಹಾದೇವಪ್ಪ, ರಾಮಕೃಷ್ಣ, ಬಸವರಾಜ, ಚನ್ನಬಸವನಗೌಡ, ಕುಮಾರಪ್ಪ, ನಾಗರಾಜ, ವೀರೇಶ್ ಸೇರಿದಂತೆ ಗ್ರಾಮಸ್ಥರು ಹಾಗೂ ಇತರರು ಭಾಗವಹಿಸಿದರು.



ವಿಪತ್ತು ನಿರ್ವಹಣಾ ಪ್ರಾಧಿಕಾರದ ಮುಂಜಾಗ್ರತಾ ಕ್ರಮ ಪಾಲಿಸಿ : ಡಿಸಿ ಕವಿತಾ ಎಸ್.ಮನ್ನಿಕೇರಿ

ವಿಜಯನಗರ,ಮಾ.06-

ಪೂರ್ವ ಮುಂಗಾರು ಅವಧಿಯಲ್ಲಿ ವಿಜಯನಗರ ಜಿಲ್ಲೆಯಾದ್ಯಂತ ಗುಡುಗು, ಸಿಡಿಲು ಹಾಗೂ ಗಾಳಿ ಮಳೆಯಿಂದ ಸಾಕಷ್ಟು ಸಾವು-ನೋವು ಸಂಭವಿಸುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಹಾಗೂ ವಿಶೇಷವಾಗಿ ರೈತರು ಮುಂಜಾಗ್ರತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ಮನವಿ ಮಾಡಿದರು.

ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಗೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪೂರ್ವ ಮುಂಗಾರು ಅವಧಿಯಲ್ಲಿ ಗುಡುಗು-ಸಿಡಿಲಿನ ಶಬ್ದ ಕೇಳಿಸಿದ ತಕ್ಷಣ ತೆರೆದ ಮೈದಾನ, ಗದ್ದೆ ಅಥವಾ ಗುಡ್ಡಗಾಡು ಪ್ರದೇಶದಲ್ಲಿದ್ದರೆ ಕೂಡಲೇ ಸುರಕ್ಷಿತ ಕಟ್ಟಡದ ಒಳಗೆ ಆಶ್ರಯ ಪಡೆಯಬೇಕು. ಒಂಟಿ ಮರ ಅಥವಾ ಎತ್ತರದ ಮರಗಳ ಕೆಳಗೆ ಆಶ್ರಯ ಪಡೆಯಬಾರದು. ಮೊಬೈಲ್, ಟಿವಿ, ಫ್ರಿಡ್ಜ್ ಸೇರಿದಂತೆ ವಿದ್ಯುತ್ ಉಪಕರಣಗಳ ಬಳಕೆಯನ್ನು ತಪ್ಪಿಸಬೇಕು. ಸಿಡಿಲಿನ ಮುನ್ಸೂಚನೆ ಪಡೆಯಲು ಕೇಂದ್ರ ಸರ್ಕಾರ ಅಭಿವೃದ್ಧಿಪಡಿಸಿರುವ ದಾಮಿನಿ ಆಪ್ ಬಳಸುವುದು ಸೂಕ್ತ ಎಂದು ತಿಳಿಸಿದರು.

ರೈತರು ಗುಡುಗು-ಮಿಂಚು ಆರಂಭವಾದಾಗ ಜಾನುವಾರುಗಳನ್ನು ಮರಗಳ ಕೆಳಗೆ ಅಥವಾ ವಿದ್ಯುತ್ ಕಂಬಗಳಿಗೆ ಕಟ್ಟದೆ ಸುರಕ್ಷಿತವಾದ ಶೆಡ್ ಅಥವಾ ಕೊಟ್ಟಿಗೆಯಲ್ಲಿ ಕಟ್ಟಬೇಕು. ಮಳೆ ಬರುವ ಮುನ್ಸೂಚನೆ ಇದ್ದಾಗ ಹೊಲ-ಗದ್ದೆಗಳಲ್ಲಿ ಕೆಲಸ ಮಾಡುತ್ತಿದ್ದರೆ ತಕ್ಷಣ ನಿಲ್ಲಿಸಿ ಸುರಕ್ಷಿತ ಸ್ಥಳಕ್ಕೆ ತೆರಳಬೇಕು ಎಂದು ಸಲಹೆ ನೀಡಿದರು.

ಗಾಳಿ ಮಳೆಯಿಂದ ವಿದ್ಯುತ್ ತಂತಿಗಳು ತುಂಡಾಗಿ ಬೀಳುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ಎಚ್ಚರಿಕೆಯಿಂದಿರಬೇಕು. ಅಂತಹ ಘಟನೆ ಕಂಡುಬಂದಲ್ಲಿ ತಕ್ಷಣ ಜೆಸ್ಕಾಂ ಅಧಿಕಾರಿಗಳಿಗೆ ಮಾಹಿತಿ ನೀಡಬೇಕು. ಮಳೆ ವೇಳೆ ವಾಹನ ಚಾಲನೆ ಮಾಡುವವರು ರಸ್ತೆ ಬದಿಯ ಮರಗಳ ಕೆಳಗೆ ವಾಹನ ನಿಲ್ಲಿಸದೆ ಸುರಕ್ಷಿತ ಸ್ಥಳದಲ್ಲಿ ನಿಲ್ಲಿಸಬೇಕು ಎಂದು ತಿಳಿಸಿದರು. ಯಾವುದೇ ಆಕಸ್ಮಿಕ ಘಟನೆ ಸಂಭವಿಸಿದಲ್ಲಿ ತಕ್ಷಣ ಹತ್ತಿರದ ತಹಶೀಲ್ದಾರ್ ಕಚೇರಿ ಅಥವಾ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಹಾಯವಾಣಿ ಸಂಖ್ಯೆ 1077 ಗೆ ಕರೆ ಮಾಡಿ ಮಾಹಿತಿ ನೀಡಬಹುದು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನೋಂಗ್ಜಾಯ್ ಮಹ್ಮದ್ ಅಲಿ ಅಕ್ರಂ ಷಾ, ಅಪರ ಜಿಲ್ಲಾಧಿಕಾರಿ ಇ. ಬಾಲಕೃಷ್ಣ, ಸಹಾಯಕ ಆಯುಕ್ತ ವಿವೇಕಾನಂದ ಸೇರಿದಂತೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

ಡಿಎಲ್‌ಆರ್‌ಸಿ-ಡಿಸಿಸಿ ಸಭೆ ಅಧಿಕಾರಿಗಳು ಸಮನ್ವಯತೆಯಿಂದ ಕೆಲಸ ಮಾಡಲು ಸಂಸದ ಈ.ತುಕಾರಾಮ್ ತಾಕೀತು

ಬಳ್ಳಾರಿ,ಮಾ.06-

ಕೇಂದ್ರ ಮತ್ತು ರಾಜ್ಯ ಸರ್ಕಾರದ ಬ್ಯಾಂಕ್ ವಲಯ ಯೋಜನೆಗಳನ್ನು ಜನರಿಗೆ ತಲುಪಿಸಲು ಸರ್ಕಾರಿ ಅಧಿಕಾರಿಗಳು ಮತ್ತು ಬ್ಯಾಂಕ್ ಅಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು ಎಂದು ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದ ಈ.ತುಕಾರಾಮ್ ಅವರು ಹೇಳಿದರು.

ಗುರುವಾರ ನಗರದ ಜಿಪಂ ನ ಹಳೆಯ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಬಳ್ಳಾರಿ ಜಿಲ್ಲಾ ಮಟ್ಟದ ಲೀಡ್ ಬ್ಯಾಂಕ್‌ನ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರಿ ಅಧಿಕಾರಿಗಳು ಮತ್ತು ಬ್ಯಾಂಕ್ ಅಧಿಕಾರಿಗಳ ನಡುವೆ ಸಮನ್ವಯತೆ ಇಲ್ಲ; ಇದರಿಂದ ಸರ್ಕಾರದ ಯೋಜನೆಗಳು ಸಫಲತೆ ಕಾಣುತ್ತಿಲ್ಲ ಎಂದು ಕಳವಳ ವ್ಯಕ್ತಪಡಿಸಿದ ಅವರು, ಅಧಿಕಾರಿಗಳು ಮಾನವೀಯತೆಯಿಂದ ಕೆಲಸ ಮಾಡಬೇಕು ಎಂದು ತಿಳಿಸಿದರು.

ಬಡಜನರು ಆರ್ಥಿಕವಾಗಿ ಸ್ವಾವಲಂಬನೆ ಬದುಕು ನಡೆಸಲು ಬ್ಯಾಂಕ್‌ಗಳು ಸಹಕಾರಿಯಾಗಬೇಕು. ಜನರು ನೆರವಿಗಾಗಿ ಸಲ್ಲಿಸುವ ಲೋನ್ ಅರ್ಜಿಗಳನ್ನು ಸಕಾಲದಲ್ಲಿ ಇತ್ಯರ್ಥಗೊಳಿಸುವ ಮೂಲಕ ಬಡಜನರ ಕಣ್ಣೊರೆಸುವ ಕೆಲಸ ಮಾಡಬೇಕು ಎಂದು ಸಂಸದರು ಸೂಚಿಸಿದರು.

ಸರ್ಕಾರದಿಂದ ಜಾರಿಗೊಂಡಿರುವ ವಿವಿಧ ಜನಪರ ಯೋಜನೆಗಳ ಆರ್ಥಿಕ ಸೌಲಭ್ಯವನ್ನು ಬ್ಯಾಂಕ್‌ಗಳ ಮುಖಾಂತರ ನಿಗದಿತ ಕಾಲಮಿತಿಯಲ್ಲಿಯೇ ದೊರಕಿಸಿದರೆ ಫಲಾನುಭವಿಗಳಿಗೆ ಹೆಚ್ಚಿನ ಅನುಕೂಲವಾಗುತ್ತದೆ ಎಂದರು.

ಬ್ಯಾಂಕ್ ಅಧಿಕಾರಿಗಳು ಪರಿಣಾಮಕಾರಿ ಅಭಿವೃದ್ಧಿಗಾಗಿ ಕ್ರಿಯಾಶೀಲರಾಗಿ ಕೆಲಸ ಮಾಡಬೇಕು. ವಿಶೇಷ ಆಸಕ್ತಿಯಿಂದ ಕೆಲಸ ನಿರ್ವಹಿಸಿದರೆ ಯೋಜನೆಗಳ ಫಲಾನುಭವಿಗಳಿಗೆ ಸೌಲಭ್ಯ ಒದಗಿಸಲು ಸಾಧ್ಯವಾಗುತ್ತದೆ ಎಂದು ಸಂಸದ ಈ.ತುಕಾರಾಮ್ ಅವರು ಕಿವಿಮಾತು ಹೇಳಿದರು.

ಬ್ಯಾಂಕ್ ಗಳಲ್ಲಿ ಬಾಕಿ ಉಳಿಸಿಕೊಂಡಂತಹ ಅರ್ಜಿಗಳನ್ನು ಇತ್ಯರ್ಥಕ್ಕೆ ಸಂಬಂಧಿಸಿದಂತೆ, ಸರ್ಕಾರಿ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳು ನಿಯಮಿತವಾಗಿ ಸಭೆ ಕೈಗೊಂಡು ಚರ್ಚಿಸಬೇಕು ಎಂದು ಅವರು ತಿಳಿಸಿದರು.



ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಬ್ಯಾಂಕ್ ಗಳು ಸಾಮಾನ್ಯ ಜನರ ಬೆನ್ನೆಲುಬಾಗಬೇಕು. ಬ್ಯಾಂಕ್ ಗಳು ನೀಡುವ ಲೋನ್ ಗಳು ಉಪಕಾರ ಮತ್ತು ವ್ಯವಹಾರವೇ ಹೊರತು, ದಾನಧರ್ಮವಲ್ಲ; ಈ ಅಂಶವನ್ನು ಬ್ಯಾಂಕ್ ಅಧಿಕಾರಿಗಳು ಮನವರಿಕೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ಜಿಲ್ಲೆಯಲ್ಲಿ ಪ್ರಸಕ್ತ ವಾರ್ಷಿಕ ಸಾಲ ಯೋಜನೆಯಡಿ ಮಾರ್ಚ್ ಅಂತ್ಯದೊಳಗೆ ಕೃಷಿ, ಶಿಕ್ಷಣ, ವಸತಿ, ಕೈಗಾರಿಕೆ, ಸಾಮಾಜಿಕ ಬೆಳವಣಿಗೆ ಸೇರಿದಂತೆ ಆದ್ಯತಾ ವಲಯಕ್ಕೆ ಮಂಜೂರು ಮಾಡಿರುವ ಅನುದಾನವನ್ನು ನಿಗದಿತ ಕಾಲಾವಧಿಯೊಳಗೆ ಗುರಿ ತಲುಪಬೇಕು ಎಂದು ಅಧಿಕಾರಿಗಳಿಗೆ ತಿಳಿಸಿದರು.

ಲೋನ್ ಮಂಜೂರು ಮಾಡದ ಬ್ಯಾಂಕ್ ಗಳಿಗೆ ನೋಟಿಸ್ ಜಾರಿ ಮಾಡುವಂತೆ ಮತ್ತು ಅತೃಪ್ತಿಕರವಾಗಿ ಕಾರ್ಯನಿರ್ವಹಿಸುತ್ತಿರುವ ಬ್ಯಾಂಕ್ ಗಳ ಕುರಿತು ಕೇಂದ್ರ ಆರ್ಥಿಕ ಇಲಾಖೆಗೆ ಪತ್ರ ಬರೆಯುವಂತೆ ಇದೇ ವೇಳೆ ಜಿಪಂ ಸಿಇಒ ಅವರಿಗೆ ಸೂಚಿಸಿದರು.

ಕೇಂದ್ರ ಮತ್ತು ರಾಜ್ಯ ಸರ್ಕಾರದ ಯೋಜನೆಗಳ ಕುರಿತ ಜನಸಾಮಾನ್ಯರಿಗೆ ಮಾಹಿತಿ ನೀಡಲು ಸಿಎಸ್‌ಆರ್ ಅನುದಾನದಡಿ ಎಲ್‌ಇಡಿ ವಾಹನ ಖರೀದಿಸುವಂತೆ ಜಿಪಂ ಸಿಇಒ ಅವರಿಗೆ ತಿಳಿಸಿದರು. ಇದೇ ವೇಳೆ ಉದ್ಯೋಗಿನಿ, ಪಿಎಂಇಜಿಪಿ, ಪಿಎಂ ಸ್ವನಿಧಿ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ಸಭೆ ನಡೆಸಿ ಮಾಹಿತಿ ಪಡೆದುಕೊಂಡರು.

ಸಭೆಗೂ ಮುನ್ನ ಪ್ರಧಾನಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ ಮತ್ತು ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆಯಡಿ ವಿಮೆ ಹೊಂದಿದ್ದ ಇಬ್ಬರು ವಿಮಾದಾರರ ನಾಮನಿರ್ದೇಶಿತರಿಗೆ ತಲಾ 2 ಲಕ್ಷ ರೂ. ಮೌಲ್ಯದ 2 ಚೆಕ್‌ಗಳನ್ನು ಹಸ್ತಾಂತರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ರಿಸರ್ವ್ ಬ್ಯಾಂಕ್ ಆಫ್ ಇಂಡಿಯಾ ಬೆಂಗಳೂರು ಎಜಿಎಂ ಪ್ರಭಾಕರ್.ಆರ್, ಕೆನರಾ ಬ್ಯಾಂಕ್ ನ ಪ್ರಾದೇಶಿಕ ವ್ಯವಸ್ಥಾಪಕ ಅರುಣ್ ಕುಮಾರ್ ಎ.ಜೆ., ಲೀಡ್ ಬ್ಯಾಂಕ್ ಮ್ಯಾನೇಜರ್ ಗಿರೀಶ್ ವಿ.ಕುಲಕರ್ಣಿ, ನಬಾರ್ಡ್ ನ ಎಜಿಎಂ ಯುವರಾಜ ಕುಮಾರ್ ಆರ್.ಎಸ್ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಬ್ಯಾಂಕ್ ಗಳ ಆರ್‌ಎಂ ಅಧಿಕಾರಿಗಳು ಹಾಜರಿದ್ದರು.

ಒಂದನೇಯ ಪುಟದಿಂದ

ಸಿದ್ದರಾಮಯ್ಯ : ಬಜೆಟ್ ನಲ್ಲಿ ಮಹತ್ವದ ನಿರ್ಧಾರ

ಸರ್ಕಾರ ತೀರ್ಮಾನಿಸಿದೆ.

ರಾಜ್ಯಾದ್ಯಂತ ಏಕರೂಪದ ಅಬಕಾರಿ ಸುಂಕವನ್ನು ಹೆಚ್ಚಿಸಲು ನಿರ್ಧರಿಸಲಾಗಿದ್ದು, ಎಕ್ಸ್-ಫ್ಯಾಕ್ಟರಿ ದರಪಟ್ಟಿಯ ಆಧಾರದ ಮೇಲೆ ತೆರಿಗೆಯನ್ನು ಲೆಕ್ಕ ಹಾಕಲಾಗುತ್ತದೆ. ಮದ್ಯದ ಬೆಲೆಯನ್ನು ಒಂದೇ ಬಾರಿಗೆ ಏರಿಸುವ ಬದಲು ಹಂತಹಂತವಾಗಿ ಹೆಚ್ಚಿಸಲು ಸರ್ಕಾರ ಯೋಜನೆ ರೂಪಿಸಿದೆ.

ಕಳೆದ ವರ್ಷ ಫೆಬ್ರವರಿ ಅಂತ್ಯದವರೆಗೆ ಅಬಕಾರಿ ಇಲಾಖೆಯಿಂದ 36,492 ಕೋಟಿ ರೂ. ರಾಜಸ್ವ ಸಂಗ್ರಹವಾಗಿತ್ತು (12.7% ಬೆಳವಣಿಗೆ). ಆದರೆ, 2026-27ನೇ ಸಾಲಿಗೆ ಬರೋಬ್ಬರಿ 45,000 ಕೋಟಿ ರೂ. ಸಂಗ್ರಹಿಸುವ ಗುರಿಯನ್ನು ಸರ್ಕಾರ ಇಟ್ಟುಕೊಂಡಿದೆ.

ಮಂಡಿಸಿದ 2ನೇ ಸಿಎಂ ಎನಿಸಿಕೊಂಡ ಸಿದ್ದರಾಮಯ್ಯ

ಅವರು 2014 ರಿಂದ 2021 ರವರೆಗೆ ಕರ್ನಾಟಕದ ರಾಜ್ಯಪಾಲರಾಗಿಯೂ ಸೇವೆ ಸಲ್ಲಿಸಿದ್ದಾರೆ.

ಅವಿಭಜಿತ ಆಂಧ್ರಪ್ರದೇಶದಲ್ಲಿ ಕೆ.ರೋಸಯ್ಯ ಅವರು 16 ಬಜೆಟ್‌ಗಳನ್ನು ಮಂಡಿಸುವ ಮೂಲಕ 3ನೇ ಸ್ಥಾನದಲ್ಲಿ ಇದ್ದಾರೆ. ಇವರು ತಮ ಸುದೀರ್ಘ ರಾಜಕೀಯ ಪಯಣದಲ್ಲಿ ಆಂಧ್ರಪ್ರದೇಶದ ಆರ್ಥಿಕತೆಗೆ ಪ್ರಮುಖ ಕೊಡುಗೆ ನೀಡಿದ್ದಾರೆ. ಅಸ್ಸಾಂನ ಮಾಜಿ ಮುಖ್ಯಮಂತ್ರಿ ತರುಣ್ ಗೊಗೊಯ್ ಅವರು 3 ಅವಧಿಗೆ ಮುಖ್ಯ ಮಂತ್ರಿಯಾಗಿ ಒಟ್ಟು 15 ಬಜೆಟ್‌ಗಳನ್ನು ಮಂಡಿಸಿದ್ದರು.

ತಮಿಳುನಾಡಿನ ವಿ.ಆರ್. ನೆಡುಂಚೆಳಿಯನ್ ಅವರು 14 ಬಜೆಟ್ ಮಂಡಿಸಿದ್ದರು. ಎಂ.ಜಿ. ರಾಮಚಂದ್ರನ್ ಮತ್ತು ಜೆ. ಜಯಲಲಿತಾ ನೇತೃತ್ವದ ಸಚಿವ ಸಂಪುಟಗಳಲ್ಲಿ 12 ವರ್ಷಗಳ ಕಾಲ ಹಣಕಾಸು ಸಚಿವರಾಗಿಯೂ ಕೆಲಸ ಮಾಡಿದ್ದಾರೆ.ಕರ್ನಾಟಕದ ಮಾಜಿ ಮುಖ್ಯಮಂತ್ರಿ ಮತ್ತು ಹಣಕಾಸು ಸಚಿವ ರಾಮಕೃಷ್ಣ ಹೆಗಡೆ ಅವರು ಒಟ್ಟು 13 ಬಜೆಟ್‌ಗಳನ್ನು ಮಂಡಿಸಿದ್ದರು.

ಕೇರಳದ ಅನುಭವಿ ಹಾಗೂ ಪ್ರಮುಖ ರಾಜಕಾರಣಿ ಎಂದು ಗುರುತಿಸುವ ಕೆ.ಎಂ.ಮಣಿ ಅವರು ಒಟ್ಟು 13 ಬಜೆಟ್‌ಗಳನ್ನು ಮಂಡಿಸಿದ್ದರು. ಹಲವು ವರ್ಷಗಳ ಕಾಲ ಹಣಕಾಸು ಸಚಿವರಾಗಿಯೂ ಕೆಲಸ ಮಾಡಿದ್ದಾರೆ.

2026-27ರ ಬಜೆಟ್‌ಗೂ ಮುನ್ನ ಸಿದ್ದರಾಮಯ್ಯ ಅವರು ಉಪಮುಖ್ಯಮಂತ್ರಿಯಾಗಿ 7 ಬಾರಿ ಬಜೆಟ್ ಮಂಡಿಸಿದ್ದರು. 3ಬಾರಿ ಮುಖ್ಯ ಮಂತ್ರಿಯಾಗಿ ಬಜೆಟ್ ಮಂಡಿಸಿದ್ದಾರೆ. 1995 ಮತ್ತು 1996ರಲ್ಲಿ ಎಚ್‌ಡಿ ದೇವೇಗೌಡರ ಅವರ ನೇತೃತ್ವದಲ್ಲಿ, 2 ಬಾರಿ, 1997, 1998 ಮತ್ತು 1999 ನಡುವೆ ಜೆ.ಎಚ್ ಪಟೇಲ್ ಅವರ ನೇತೃತ್ವದಲ್ಲಿ 3 ಬಾರಿ ಹಾಗೂ 2005-2006ರಲ್ಲಿ ಎನ್.ಧರಂ ಸಿಂಗ್ ಅವರ ನೇತೃತ್ವದಲ್ಲಿ 2 ಬಾರಿ ಬಜೆಟ್ ಮಂಡನೆ ಮಾಡಿದ್ದರು.

ನೀರಾವರಿಗೆ ಒತ್ತು; 22,436 ಕೋಟಿ ರೂ. ಮೀಸಲು

ಗೋದಾವರಿ ಹಾಗೂ ಇತರೆ ನದಿ ಕಣಿವೆಗಳಲ್ಲಿ ಒಟ್ಟಾರೆ 8,045 ಕೋಟಿ ರೂ. ಮೊತ್ತದ 75 ನೀರಾವರಿ ಕಾಮಗಾರಿಗಳ ಅನುಷ್ಠಾನ. ಶಿಡ್ಲಘಟ್ಟ ತಾಲೂಕಿನ 45 ಕೆರೆಗಳಿಗೆ ಮತ್ತು ಚಿಂತಾಮಣಿ ತಾಲೂಕಿನ 119 ಕೆರೆಗಳಿಗೆ ನೀರು ತುಂಬಿಸುವ ಯೋಜನೆಯನ್ನು 237 ಕೋಟಿ ರೂ. ವೆಚ್ಚದಲ್ಲಿ ಅನುಷ್ಠಾನ. ಹೊಸಕೋಟೆ ತಾಲೂಕಿನ ಸೂಲಿಬೆಲೆ ಮತ್ತು ನಂದಗುಡಿ ಹೋಬಳಿಗಳ 59 ಕೆರೆಗಳಿಗೆ ಹೆಚ್.ಎನ್ ವ್ಯಾಲಿ ಯೋಜನೆಯಿಂದ ನೀರು ತುಂಬಿಸಲು 140 ಕೋಟಿ ರೂ. ಮೊತ್ತದಲ್ಲಿ ಕಾಮಕಾರಿ. ಬೆಂಗಳೂರು ನಗರದ ವೃಷಭಾವತಿ ವ್ಯಾಲಿಯಿಂದ ನೆಲಮಂಗಲ ಮತ್ತು ದೊಡ್ಡಬಳ್ಳಾಪುರದ 259 ಕೆರೆಗಳಿಗೆ ನೀರುವ ತುಂಬಿಸುವ ಯೋಜನೆಗೆ 650 ಕೋಟಿ ರೂ. ಮೀಸಲು. ರಾಜ್ಯದ ಎಲ್ಲ ಜಿಲ್ಲೆಗಳಲ್ಲಿ ಏತ ನೀರಾವರಿ, ಚೆಕ್ ಡ್ಯಾಂ, ಕೆರೆಗಳ ಪುನಃಶ್ಚೇತನ ಅಭಿವೃದ್ಧಿಯ 112 ಕಾಮಗಾರಿಗಳಿಗೆ 1,793 ಕೋಟಿ ರೂ. ಅನುದಾನ. ಕೊಪ್ಪಳ ಜಿಲ್ಲೆಯ ಯಲಬುರ್ಗಾ, ಕುಕನೂರು ಹಾಗೂ ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನ ಜಿಡಗಾದಲ್ಲಿ 25 ಕೋಟಿ ರೂ. ವೆಚ್ಚದಲ್ಲಿ ಅಂತರ್ಜಲ ಹೆಚ್ಚಿಸಲು ಕೆರೆಗಳ ಆಧುನೀಕರಣ, ಅಣೆಕಟ್ಟು ಮತ್ತು ಪಿಕ್-ಅಪ್ ಹಾಗೂ ಚೆಕ್ಡ್ಯಾಂ ಕಾಮಗಾರಿಗಳ ಅನುಷ್ಠಾನ.

8 ರಂದು ಮಹಿಳಾ ದಿನಾಚರಣೆ, 22 ಜನ ಸಾಧಕಿಯರಿಗೆ ಪ್ರಶಸ್ತಿ ಪ್ರದಾನ ಕಲಾವತಿ ಇವರಿಂದ ಸಂಗೀತ

ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ಪ್ರಶ್ನ ಪ್ರಧಾನ ಕಾರ್ಯದರ್ಶಿ ಡಿ ಶ್ರೀನಿವಾಸ್ ಉಪಾಧ್ಯಕ್ಷರಾದ ಜಗದೀಶ.ಸಂಗಮೇಶ್ ಬಂಡಾರಿ ಮತ್ತು ಖಜಾಂಚಿ ರಮೇಶ್ ಉಪ್ರಳ. ವಿರುಪಾಕ್ಷಿ ಸಂಘಟನಾ ಕಾರ್ಯದರ್ಶಿ. ಮೌನೇಶ್ ವಡವಾಟಿ ಉಪಸ್ಥಿತರಿದ್ದರು.

ಗೃಹಿಣಿಯರಿಗೆ ಬಜೆಟ್‌ನಲ್ಲಿ ಗುಡ್ ನ್ಯೂಸ್ ಕೊಟ್ಟ ಸಿದ್ದರಾಮಯ್ಯ

ಎಂದರು. ಬೆಂಗಳೂರಿನಲ್ಲಿ ಸ್ತನ ಹಾಗೂ ಗರ್ಭಕೋಶ ಕ್ಯಾನ್ಸರ್ ಲಸಿಕಾ ಕೇಂದ್ರ

ಆರೋಗ್ಯ ಕ್ಷೇತ್ರದಲ್ಲೂ ಹಲವು ಘೋಷಣೆಗಳನ್ನು ಮಾಡಲಾಗಿದೆ. ಬೆಂಗಳೂರಿನಲ್ಲಿ ಸ್ತನ ಹಾಗೂ ಗರ್ಭಕೋಶ ಕ್ಯಾನ್ಸರ್ ಲಸಿಕಾ ಕೇಂದ್ರವನ್ನು ಸ್ಥಾಪಿಸುವುದಾಗಿ ಘೋಷಿಸಲಾಗಿದೆ. ಇದೇ ವೇಳೆ ರಾಯಚೂರು, ಬಾಗಲಕೋಟೆ, ವಿಜಯಪುರ, ಬೀದರ್, ಕೊಪ್ಪಳ, ಚಿತ್ರದುರ್ಗ, ಮಂಡ್ಯ, ಭದ್ರಾವತಿ ಮತ್ತು ಕೆಜಿಎಫ್ ಪ್ರದೇಶಗಳಲ್ಲಿನ ಇಎಸ್‌ಐ ಆಸ್ಪತ್ರೆಗಳನ್ನು ಉನ್ನತೀಕರಿಸಲಾಗುತ್ತದೆ ಎಂದು ತಿಳಿಸಿದ್ದಾರೆ. ಇನ್ನೂ ವಿಜಯಪುರದಲ್ಲಿ 12,000 ಮೆಟ್ರಿಕ್ ಟನ್ ಸಾಮರ್ಥ್ಯದ ಶೀತಲ ಗೃಹ ನಿರ್ಮಾಣ ಘಟಕ ಸ್ಥಾಪಿಸುವ ಯೋಜನೆಯನ್ನೂ ಘೋಷಿಸಲಾಗಿದೆ. ರಾಜ್ಯದ ಆರ್ಥಿಕ ಸ್ಥಿತಿಗತಿಗಳ ಬಗ್ಗೆ ಮಾತನಾಡಿದ ಸಿಎಂ, ಕರ್ನಾಟಕ ಆರ್ಥಿಕ ಅಭಿವೃದ್ಧಿಯಲ್ಲಿ ದೇಶದ ಮಟ್ಟದಲ್ಲಿ ಮುಂಚೂಣಿಯಲ್ಲಿದ್ದು, ಅಂತರಾಷ್ಟ್ರೀಯ ಮಟ್ಟದಲ್ಲಿಯೂ ಪ್ರಮುಖ ಪಾತ್ರ ವಹಿಸುತ್ತಿದೆ ಎಂದು ಹೇಳಿದರು. ಜೊತೆಗೆ ಒಕ್ಕೂಟ ಸರ್ಕಾರವು ರಾಜ್ಯಗಳತ್ತ ಇನ್ನಷ್ಟು ಸಂವೇದನಾಶೀಲವಾಗಿ ವರ್ತಿಸಬೇಕು ಎಂದು ಅಭಿಪ್ರಾಯಪಟ್ಟರು.

ಒಟ್ಟಾರೆ, 2026-27ರ ಬಜೆಟ್‌ನಲ್ಲಿ ಗ್ಯಾರಂಟಿ ಯೋಜನೆಗಳು, ಆರೋಗ್ಯ, ಮೂಲಸೌಕರ್ಯ ಹಾಗೂ ಕೃಷಿ ಕ್ಷೇತ್ರಗಳಿಗೆ ಸರ್ಕಾರ ಹೆಚ್ಚಿನ ಒತ್ತು ನೀಡಿರುವುದು ಗಮನಾರ್ಹವಾಗಿದೆ.

'ನಶಾ ಮುಕ್ತ ಭಾರತ ಯುವ ಶುದ್ಧಿ ಅಭಿಯಾನ ವಾಕಥಾನ್'' ಭವ್ಯ ಯಶಸ್ಸು

ಕಾಲೇಜುಗಳನ್ನು ಹೊಂದಿದೆ ಎಂದು ಹೇಳಿದರು. ಪ್ರತಿವರ್ಷ ಸುಮಾರು 63 ಸಾವಿರ ವಿದ್ಯಾರ್ಥಿಗಳಿಗೆ ಪದವಿ ನೀಡಲಾಗುತ್ತಿದ್ದು, ನೂರಕ್ಕೂ ಹೆಚ್ಚು ಚಿನ್ನದ ಪದಕಗಳನ್ನು ನೀಡಿ ದೇಶದ ಪ್ರಮುಖ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯವಾಗಿ ಬೆಳೆದಿದೆ ಎಂದು ವಿವರಿಸಿದರು.

ದೇಶದಲ್ಲಿ ಅಂಗಾಂಗ ದಾನದ ಕೊರತೆ ಇರುವುದನ್ನು ಉಲ್ಲೇಖಿಸಿದ ಅವರು, ಪ್ರತಿ ವರ್ಷ ಸುಮಾರು 2ರಿಂದ 3 ಲಕ್ಷ ಅಂಗಾಂಗ ದಾನದ ಅವಶ್ಯಕತೆ ಇದೆ. ಆದರೆ ದಾನ ಮಾಡಲು ಮುಂದಾಗುವವರ ಸಂಖ್ಯೆ ಕಡಿಮೆ ಇದೆ. ಕರ್ನಾಟಕದಲ್ಲಿ ಸುಮಾರು 58 ಸಾವಿರ ಮಂದಿ ಅಂಗಾಂಗ ದಾನಕ್ಕೆ ನೋಂದಣಿ ಮಾಡಿಸಿಕೊಂಡಿದ್ದು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳಲ್ಲಿ 10 ಸಾವಿರಕ್ಕೂ ಹೆಚ್ಚು ಮಂದಿ ಅಂಗಾಂಗ ದಾನಕ್ಕೆ ಪ್ರತಿಜ್ಞೆ ಕೈಗೊಂಡಿರುವುದು ಸಮಾಜಕ್ಕೆ ಮಾದರಿಯಾಗಿದೆ ಎಂದರು. ಒಬ್ಬ ವ್ಯಕ್ತಿಯ ಅಂಗಾಂಗ ದಾನದಿಂದ ಎಂಟು ಜನರ ಜೀವ ಉಳಿಸಬಹುದು ಎಂದು ಅವರು ಹೇಳಿದರು.

ಜಿಲ್ಲಾಧಿಕಾರಿ ನಿತೀಶ್ ಕೆ., ಐಎಎಸ್ ಮಾತನಾಡಿ, ಮಾದಕ ವಸ್ತುಗಳ ಬಳಕೆ ಯುವಕರ ಭವಿಷ್ಯಕ್ಕೆ ದೊಡ್ಡ ಅಪಾಯವಾಗಿದ್ದು ಸಮಾಜದ ಪ್ರತಿಯೊಬ್ಬರೂ ಇದರ ವಿರುದ್ಧ ಜಾಗೃತರಾಗಬೇಕು ಎಂದು ಕರೆ ನೀಡಿದರು. ರಾಯಚೂರು ಜಿಲ್ಲೆ ಗಡಿಭಾಗದಲ್ಲಿರುವುದರಿಂದ ಬೇರೆ ರಾಜ್ಯಗಳ ಸಂಪರ್ಕದ ಹಿನ್ನೆಲೆಯಲ್ಲಿ ಮಾದಕ ವಸ್ತುಗಳ ಅಕ್ರಮ ಸಾಗಾಟ ಹೆಚ್ಚಾಗುವ ಸಾಧ್ಯತೆ ಇದೆ ಎಂದು ಹೇಳಿದರು. ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ತಮ್ಮ ಸುತ್ತಮುತ್ತ ನಡೆಯುವ ಅಕ್ರಮ ಚಟುವಟಿಕೆಗಳ ಬಗ್ಗೆ ಜಿಲ್ಲಾಡಳಿತ ಮತ್ತು ಪೊಲೀಸ್ ಇಲಾಖೆಗೆ ತಕ್ಷಣ ಮಾಹಿತಿ ನೀಡಬೇಕು ಎಂದು ಮನವಿ ಮಾಡಿದರು.

ಜಿಲ್ಲೆಯಲ್ಲಿ ಮಾದಕ ವ್ಯಸನಕ್ಕೆ ಒಳಗಾದವರ ಪುನರ್ವಸತಿಗಾಗಿ ಶೀಘ್ರದಲ್ಲೇ ಡಿಅಡಿಕ್ಷನ್ ಕೇಂದ್ರ ಸ್ಥಾಪಿಸುವ ಯೋಜನೆ ರೂಪಿಸಲಾಗುತ್ತಿದೆ. ರಾಯಚೂರು ರಿಮ್ಸ್ ಆಸ್ಪತ್ರೆಯಲ್ಲಿ ವಿಶೇಷ ವಿಭಾಗದ ಮೂಲಕ ಈ ಕೇಂದ್ರ ಆರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದ್ದು, ಅಗತ್ಯ ನಿಧಿಯನ್ನು ಕೆಕೆಆರ್‌ಡಿಬಿ ಮೂಲಕ ಒದಗಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಸು ಗಿರಿ ಮಾತನಾಡಿ, ವಿದ್ಯಾರ್ಥಿಗಳಲ್ಲಿ ಮಾದಕ ವಸ್ತುಗಳ ಬಳಕೆ ಹೆಚ್ಚುತ್ತಿರುವುದು ಆತಂಕಕಾರಿ ವಿಷಯವಾಗಿದೆ ಎಂದು ಹೇಳಿದರು. ನಗರದಲ್ಲಿ ವೈದ್ಯಕೀಯ ಹಾಗೂ ಇಂಜಿನಿಯರಿಂಗ್ ಸೇರಿದಂತೆ ವಿವಿಧ ಕೋರ್ಸ್‌ಗಳಿಗಾಗಿ ಅನೇಕ ವಿದ್ಯಾರ್ಥಿಗಳು ಹೊರರಾಜ್ಯಗಳಿಂದ ಬರುತ್ತಿದ್ದಾರೆ. ಕೆಲವರು ಗಾಂಜಾ ಸೇರಿದಂತೆ ಮಾದಕ ವಸ್ತುಗಳ ಬಳಕೆಗೆ ಒಳಗಾಗುತ್ತಿರುವುದು ಗಮನಕ್ಕೆ ಬಂದಿದೆ. ಇದನ್ನು ತಡೆಯಲು ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಿದೆ ಎಂದು ಅವರು ಎಚ್ಚರಿಸಿದರು. ಮಾದಕ ವಸ್ತುಗಳನ್ನು ಮಾರಾಟ ಮಾಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದರು.

ವಾಕಥಾನ್ ನಗರದ ಎಸ್.ಪಿ. ಪರೇಡ್ ಮೈದಾನದಿಂದ ಆರಂಭವಾಗಿ ಗನ್ ಸರ್ಕಲ್, ಮಹಾಲೇಶ್ವರ ವೃತ್ತ, ಬಸವೇಶ್ವರ ಸರ್ಕಲ್ ಮಾರ್ಗವಾಗಿ ಗೋಣಿ ಗಾಂಧಿ ಕ್ರೀಡಾಂಗಣದಲ್ಲಿ ಮುಕ್ತಾಯಗೊಂಡಿತು. ಡೊಳ್ಳುಗಳು, ಸೈಕಲ್ ಜಾಥಾ ಹಾಗೂ ಜಾಗೃತಿ ಫಲಕಗಳೊಂದಿಗೆ ಮೆರವಣಿಗೆ ನಡೆಯಿತು.

ಕಾರ್ಯಕ್ರಮದಲ್ಲಿ ನವೋದಯ ಸಂಸ್ಥೆಯ ವ್ಯವಸ್ಥಾಪಕ ಎಸ್.ಆರ್. ರೆಡ್ಡಿ, ರಿಮ್ಸ್ ನಿರ್ದೇಶಕ ಡಾ. ಬಿ.ಎಚ್. ರಮೇಶ್, ನಾರ್ಕೋಟಿಕ್ಸ್ ಕಂಟ್ರೋಲ್ ಬ್ಯೂರೋದ ನಿರೀಕ್ಷಕ ವಿಶಾನೋ ಸಿಂಗ್, ದಿಶಾಭೋದ್ ಫೌಂಡೇಶನ್‌ನ ಡಾ. ಹರ್ಷ ಹರ್ದಾರ್, ಎಸ್.ಪಿ. ಚಿದಾನಂದ್, ವಿವಿಧ ಕಾಲೇಜುಗಳ ಪ್ರಾಂಶುಪಾಲರು, ಶಿಕ್ಷಕರು ಹಾಗೂ ಸಾವಿರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

ವಿದ್ಯಾರ್ಥಿಗಳು ''ನಶಾ ಮುಕ್ತ ಭಾರತ, ನಶಾ ಮುಕ್ತ ಕರ್ನಾಟಕ, ನಶಾ ಮುಕ್ತ ಕ್ಯಾಂಪಸ್'' ಎಂಬ ಘೋಷಣೆಗಳೊಂದಿಗೆ ಜಾಗೃತಿ ಮೂಡಿಸಿದರು.

24.96 ಲಕ್ಷ ರೂ. ಮೌಲ್ಯದ ಸ್ವತ್ತು ವಶ; 7 ಆರೋಪಿಗಳ ಬಂಧನ: ಡಾ.ಶರಣಪ್ಪ ಎಸ್.ಡಿ.



ಕಲಬುರಗಿ,ಮಾ.06-

ನಗರದ ನಾಲ್ಕು ವಿವಿಧ ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ನಡೆದ ಮನೆಗಳ್ಳತನ, ಬೈಕ್ ಕಳ್ಳತನ ಹಾಗೂ ಸುಲಿಗೆ ಪ್ರಕರಣಗಳನ್ನು ಪತ್ತೆ ಹಚ್ಚಿ ಒಟ್ಟು 7 ಮಂದಿ ಆರೋಪಿಗಳನ್ನು ಬಂಧಿಸಿ 24.96 ಲಕ್ಷ ರೂ. ಮೌಲ್ಯದ ಸ್ವತ್ತನ್ನು ಜಪ್ತಿ ಮಾಡಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ. ಶರಣಪ್ಪ ಎಸ್.ಡಿ ತಿಳಿಸಿದ್ದಾರೆ.

ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆರ್.ಜಿ ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 2022ರಲ್ಲಿ ನಡೆದ ಮನೆಗಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಮಹಾರಾಷ್ಟ್ರದ ಅಕ್ಕಲಕೋಟೆ ತಾಲೂಕಿನ ಮೈಂದರ್ಗಿ ನಿವಾಸಿ ಸುರೇಶ್ ಅಲಿಯಾಸ್ ಗಂಗಾರಾಮ ಡೌಲತ್ ಚವ್ಹಾಣನನ್ನು ಬಂಧಿಸಿ 6.75 ಲಕ್ಷ ರೂ. ಮೌಲ್ಯದ 45 ಗ್ರಾಂ ಬಂಗಾರದ ಆಭರಣಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ತಿಳಿಸಿದರು.

ಚೌಕ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ವಿವಿಧ ಸ್ಥಳಗಳಲ್ಲಿ ಕಳ್ಳತನವಾಗಿದ್ದ ಬೈಕ್‌ಗಳನ್ನು ಪತ್ತೆ ಹಚ್ಚಲಾಗಿದ್ದು, ಅಂತಾರಾಜ್ಯ ಹಾಗೂ ಅಂತರ್ ಜಿಲ್ಲಾ ಅಪರಾಧಿಯಾಗಿದ್ದ ಶೇಖ್ ನಿಸಾರ್ ಅಹಮದ್‌ನನ್ನು ಬಂಧಿಸಿ ?3.90 ಲಕ್ಷ ಮೌಲ್ಯದ 8 ಬೈಕ್‌ಗಳನ್ನು ಜಪ್ತಿ ಮಾಡಲಾಗಿದೆ.

ಅದೇ ರೀತಿ ಸ್ಟೇಷನ್ ಬಝಾರ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 8.20 ಲಕ್ಷ ರೂ. ಮೌಲ್ಯದ 14 ದ್ವಿಚಕ್ರ ವಾಹನಗಳನ್ನು ವಶಕ್ಕೆ ಪಡೆದು, ಕಾಳಗಿ ತಾಲೂಕಿನ ಕೋರವಾರ ನಿವಾಸಿ ರಾಮಚಂದ್ರ ಹೊಸಮನಿಯನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಇನ್ನೂ ಎಂ.ಬಿ.ನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ದಾಖಲಾಗಿದ್ದ 5 ಸುಲಿಗೆ ಪ್ರಕರಣಗಳಲ್ಲಿ ಭಾಗಿಯಾಗಿದ್ದ ನಾಲ್ವರು ಕುಖ್ಯಾತ ದರೋಡೆಕೋರರನ್ನು ಬಂಧಿಸಲಾಗಿದೆ.

ಆರೋಪಿಗಳಿಂದ 6.11 ಲಕ್ಷ ರೂ. ಮೌಲ್ಯದ ಮೊಬೈಲ್ ಫೋನ್‌ಗಳು, ಬಂಗಾರದ ಆಭರಣಗಳು, ಬೈಕ್, ವ್ಯಾನಿಟಿ ಬ್ಯಾಗ್ ಸೇರಿದಂತೆ ಇತರೆ ಸ್ವತ್ತುಗಳನ್ನು ಜಪ್ತಿ ಮಾಡಲಾಗಿದೆ.

ಈ ಪ್ರಕರಣಗಳಿಗೆ ಸಂಬಂಧಿಸಿದಂತೆ ಅಜಾದಪುರದ ಅಬ್ಬು ಶೇಖ್, ಬಿಲಾಲಬಾದ ಕಾಲೋನಿಯ ಮಾಜಿದ್ ಅಲಿಯಾಸ್ ಮಟಕಾ ಮಾಜೀದ್, ಸೋನಿಯಾ ಗಾಂಧಿ ಕಾಲೋನಿಯ ಶೇಖ್ ಹುಸೇನ್ ಹಾಗೂ ಮಿಲ್ಲತ್ ನಗರದ ಮಹಮದ್ ಆರೀಫ್ ಅವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಡಿಸಿಪಿ ಪ್ರವೀಣ್ ನಾಯಕ, ಎಸಿಪಿಗಳಾದ ಶಿವನಗೌಡ ಪಾಟೀಲ್, ಶರಣಬಸಪ್ಪ ಸುಬೇದಾರ್, ವಾಜೀದ್ ಪಟೇಲ್ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.



ವ್ಯಾಸನತಾಂಡದಲ್ಲಿ ಮೂಲಭೂತ ಸೌಲಭ್ಯಗಳಿಗೆ ಕ್ರಮ ಕೈಗೊಳ್ಳಿ: ಶಾಸಕಿ ಎಂ.ಪಿ.ಲತಾ ಮಲ್ಲಿಕಾರ್ಜುನ

ವಿಜಯನಗರ, ಮಾ.06-

ವ್ಯಾಸನತಾಂಡಕ್ಕೆ ಸ್ವಚ್ಛತೆ, ಸಮರ್ಪಕ ಕುಡಿಯುವ ನೀರು ಪೂರೈಕೆ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು ಹಾಗೂ ಗ್ರಾಮಗಳಲ್ಲಿ ಸ್ವಚ್ಛತೆ ಕಾಪಾಡುವತ್ತ ಅಧಿಕಾರಿಗಳು ವಿಶೇಷ ಗಮನ ಹರಿಸಬೇಕು ಎಂದು ಶಾಸಕಿ ಎಂ.ಪಿ.ಲತಾ ಮಲ್ಲಿಕಾರ್ಜುನ ಸೂಚಿಸಿದರು.

ತಾಲೂಕಿನ ವ್ಯಾಸನತಾಂಡ ಮತ್ತು ಹಲುವಾಗಲು ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗಗಳಿಗೆ ಸುಗಮ ಸಂಚಾರ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಈ ರಸ್ತೆ ನಿರ್ಮಿಸಲಾಗುತ್ತಿದೆ. ವ್ಯಾಸನತಾಂಡದಿಂದ ವ್ಯಾಸನತಾಂಡ ಕ್ರಾಸ್‌ವರೆಗೆ ರಸ್ತೆ ಹಾಳಾಗಿರುವುದರಿಂದ, ಅದನ್ನು ಸಿಸಿ ರಸ್ತೆಯಾಗಿ ಅಭಿವೃದ್ಧಿಪಡಿಸುವ ಕಾಮಗಾರಿ ಕೆಲವೇ ದಿನಗಳಲ್ಲಿ ಪ್ರಾರಂಭವಾಗಲಿದೆ ಎಂದು ಹೇಳಿದರು.

ಕೆ.ಕಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಎಲ್ಲಾ ಹಳ್ಳಿಗಳಲ್ಲೂ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಬೇಸಿಗೆ ಆರಂಭವಾಗುತ್ತಿರುವ ಹಿನ್ನೆಲೆ ಎಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ಎದುರಾಗಬಾರದು. ಪ್ರತಿಯೊಂದು ಹಳ್ಳಿಯಲ್ಲೂ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆ ಮಾಡುವಂತೆ ಪಿಡಿಒಗೆ ಅವರು ಸೂಚನೆ ನೀಡಿದರು.

ಇದೇ ವೇಳೆ ತಾಲೂಕಿನ ಹಲುವಾಗಲು ಗ್ರಾಮದಿಂದ ಕುಂಚೂರು ಕೆರೆ ತಾಂಡದವರೆಗೆ ಅಂದಾಜು 75 ಲಕ್ಷ ರೂ. ವೆಚ್ಚದಲ್ಲಿ ಸಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ, ಗ್ಯಾರಂಟಿ ಸಮಿತಿ ಅಧ್ಯಕ್ಷ ಉದಯ್ ಶಂಕರ್, ಪ್ರಚಾರ ಸಮಿತಿ ಅಧ್ಯಕ್ಷ ಕೃಷ್ಣ ನಾಯ್ಕ್, ಮತ್ತೂರು ಬಸವರಾಜ್, ನೀಲಗುಂದ ಸಹಕಾರ ಸಂಘದ ನಿರ್ದೇಶಕ ತಿರುಪತಿ ನಾಯ್ಕ್, ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಸಂತೋಷ್ ನಾಯ್ಕ್, ಬಸವರಾಜ್ ನಾಯ್ಕ್, ಷಣ್ಮುಖ ನಾಯ್ಕ್, ಕೊಟ್ರೇಶ್ ನಾಯ್ಕ್, ಲ್ಯಾಂಡ್ ಆರ್ಮಿ ಎಇಇ ಶಂಕರ್ ನಾಯ್ಕ್, ನೂತನ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮದರಸಾ ಶಿಕ್ಷಕರ ಮೇಲೆ ಹಲ್ಲೆ ಪ್ರಕರಣ : 18 ಮಂದಿಯ ಬಂಧನ

ಬೀದರ್ ,ಮಾ.06-

ಬಸವಕಲ್ಯಾಣದಲ್ಲಿ ಮದರಸಾ ಶಿಕ್ಷಕರ ಮೇಲೆ ನಡೆದ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿ ಹಲ್ಲೆ ಮಾಡಿದ ಆರು ಮಂದಿ ಸೇರಿದಂತೆ ಒಟ್ಟು 18 ಜನರನ್ನು ಬಂಧಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ತಿಳಿಸಿದ್ದಾರೆ. ಕರ್ತವ್ಯಕ್ಕೆ ಅಡ್ಡಿಪಡಿಸಿದ 12 ಜನರನ್ನೂ ಬಂಧಿಸಲಾಗಿದೆ ಎಂದು ಮಾಹಿತಿ ನೀಡಿದ್ದಾರೆ.

ಮಾರ್ಚ್ 3ರ ರಾತ್ರಿ ಸುಮಾರು 8 ಗಂಟೆಗೆ ಬಸವಕಲ್ಯಾಣದ ಪ್ರವಾಸಿ ಮಂದಿರದ ಹತ್ತಿರ ಕೆಲ ಯುವಕರು ಕುಡಿದ ಅಮಲಿನಲ್ಲಿ ಗಲಾಟೆ ಮಾಡುತ್ತಿದ್ದರು. ಅವರನ್ನು ಸಮಾಧಾನಪಡಿಸಲು ಹೋದ ಇಬ್ಬರು ಮದರಸಾ ಶಿಕ್ಷಕರೊಂದಿಗೆ ವಾಗ್ವಾದ ಉಂಟಾಗಿ, ಯುವಕರು ಅವರ ಮೇಲೆ ಹಲ್ಲೆ ನಡೆಸಿದರು. ಗಾಯಗೊಂಡ ಶಿಕ್ಷಕರು ಬಸವಕಲ್ಯಾಣ ನಗರ ಪೊಲೀಸ್ ಠಾಣೆಗೆ ದೂರು ನೀಡಿದ ಹಿನ್ನೆಲೆ ಪ್ರಕರಣ ದಾಖಲಿಸಲಾಗಿತ್ತು.

ಆರೋಪಿಗಳನ್ನು ಬಂಧಿಸಲು ಪೊಲೀಸರು ಮುಂದಾದಾಗ, ಠಾಣೆ ಮುಂದೆ ಒಂದು ಸಮುದಾಯದ ಜನರು ಸೇರಿಕೊಂಡು ವಾಹನಗಳಿಗೆ ಅಡ್ಡಿ ಉಂಟುಮಾಡಿ ಕಾರ್ಯಾಚರಣೆಗೆ ತೊಂದರೆ ನೀಡಿದ್ದಾರೆ. ಅವರನ್ನು ಶಾಂತಿಯುತವಾಗಿ ತೆರಳಿಸಲು ಪ್ರಯತ್ನಿಸಿದರೂ ಸಹಕರಿಸದ ಹಿನ್ನೆಲೆ, ಅವರ ವಿರುದ್ಧವೂ ಪ್ರತ್ಯೇಕ



ಪ್ರಕರಣ ದಾಖಲಿಸಲಾಗಿದೆ.

ಶಿಕ್ಷಕರ ಮೇಲೆ ಹಲ್ಲೆ ಮಾಡಿದ ಐದು ಆರೋಪಿಗಳನ್ನು ಈಗಾಗಲೇ ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಆರನೇ ಆರೋಪಿಯನ್ನು ಬಂಧಿಸಲಾಗಿದ್ದು, ಆತನನ್ನೂ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗುತ್ತದೆ. ಎರಡನೇ ಪ್ರಕರಣದಲ್ಲಿ ಭಾಗಿಯಾದವರನ್ನು ಸಿಸಿಟಿವಿ ದೃಶ್ಯಾವಳಿಗಳ ಮೂಲಕ ಪತ್ತೆ ಹಚ್ಚಿ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಎಸ್‌ಪಿ ತಿಳಿಸಿದ್ದಾರೆ.

ಈ ಘಟನೆಯಲ್ಲಿ ಯಾವುದೇ ಕೋಮು ಆಯಾಮವಿಲ್ಲ ಎಂದು ಸ್ಪಷ್ಟಪಡಿಸಿದ ಅವರು, ಬಸವಕಲ್ಯಾಣ ದಲ್ಲಿ ಶಾಂತಿ ವಾತಾವರಣವಿದ್ದು, ಜನತೆ ಶಾಂತಿ ಕಾಪಾಡಬೇಕು ಎಂದು ಮನವಿ ಮಾಡಿದರು. ಸಂಪೂರ್ಣ ಮಾಹಿತಿ ಇಲ್ಲದೆ ಸಾಮಾಜಿಕ ಜಾಲತಾ ಣ ಗಳಲ್ಲಿ ಪೋಸ್ಟ್ ಹಾಗೂ ವಿಡಿಯೋಗಳನ್ನು ಹಂಚಿಕೊಳ್ಳುತ್ತಿರುವ ಖಾತೆಗಳ ಮೇಲೆ ಕಣ್ಣಿಟ್ಟಿದ್ದೇವೆ. ವದಂತಿ ಹರಡುವುದು ಅಥವಾ ಹಿಂಸೆಗೆ ಪ್ರಚೋದನೆ ನೀಡುವವರ ವಿರುದ್ಧ ಕಟ್ಟುನಿಟ್ಟಿನ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ಉಚಿತ ಆರೋಗ್ಯ ತಪಾಸಣಾ ಶಿಬಿರ



ಬಳ್ಳಾರಿ,ಮಾ.06-

ಸಿರುಗುಪ್ಪ ಪಟ್ಟಣದಲ್ಲಿ ಬಡವರು ಹಾಗೂ ಮಧ್ಯಮ ವರ್ಗದ ಜನರಿಗೆ ಉಚಿತ ಆರೋಗ್ಯ ತಪಾಸಣಾ ಶಿಬಿರವು ಅನುಕೂಲವಾಗಿದ್ದು, ಇದರಿಂದ ಜನರಿಗೆ ಆರ್ಥಿಕ ಉಳಿತಾಯವಾಗುತ್ತದೆ ಎಂದು ಹರಗಿನಡೋಣಿ ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಪಟ್ಟಣದ ಶಿವಶಕ್ತಿ ಸಾಂಸ್ಕೃತಿಕ ಭವನದಲ್ಲಿ ಬೆಂಗಳೂರಿನ ವೈದೇಹಿ ಆಸ್ಪತ್ರೆ, ಸಿರುಗುಪ್ಪ ಪ್ರಾಥಮಿಕ ಸಹಕಾರಿ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ಹಾಗೂ ತಾಲೂಕು ವ್ಯವಸಾಯ ಉತ್ಪನ್ನ ಮಾರಾಟ ಸಹಕಾರ ಸಂಘಗಳ ಸಹಭಾಗಿತ್ವದಲ್ಲಿ ಆಯೋಜಿಸಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಶ್ರಮದಿಂದ ಬದುಕು ಕಟ್ಟಿಕೊಂಡಿರುವವರು ಸಮಾಜದ ಬಗ್ಗೆ ಕಾಳಜಿ ಹೊಂದಿದ್ದು, ಇಂತಹ ಉಚಿತ ಆರೋಗ್ಯ ಕಾರ್ಯಕ್ರಮಗಳನ್ನು ಆಯೋಜಿಸುವುದು ಅವರ ಸಾಮಾಜಿಕ ಬದ್ಧತೆಯನ್ನು ಸೂಚಿಸುತ್ತದೆ ಎಂದು ಅವರು ಹೇಳಿದರು.

ಈ ವೇಳೆ ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಚೊಕ್ಕ ಬಸವನಗೌಡ ಮಾತನಾಡಿದರು. ಸಿರುಗುಪ್ಪದ ಸರ್ಕಾರಿ ಆಸ್ಪತ್ರೆಯ ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣೆ ಹಾಗೂ ಮಾರ್ಗದರ್ಶನ ನೀಡಲಾಗಿದ್ದು, ಸುಮಾರು 200ಕ್ಕೂ ಹೆಚ್ಚು ಜನರು ತಪಾಸಣೆ ಮಾಡಿಸಿಕೊಂಡು ಔಷಧಿ ಪಡೆದರು. ಕಾರ್ಯಕ್ರಮದಲ್ಲಿ ಗುರು ಬಸವ ಮಠದ ಬಸವಭೂಷಣ ಸ್ವಾಮೀಜಿ, ವೈದೇಹಿ ಆಸ್ಪತ್ರೆಯ ಮಲ್ಲಿಕಾರ್ಜುನ, ಪಿಎಲ್‌ಡಿ ಬ್ಯಾಂಕ್ ವ್ಯವಸ್ಥಾಪಕ ತಿಪ್ಪಣ್ಣ ಬನಸೋಡಿ, ಉಪಾಧ್ಯಕ್ಷ ಡಿ.ಆರ್. ಚಂದ್ರರೆಡ್ಡಿ, ನಿರ್ದೇಶಕರಾದ ಪಿ. ತಿಮ್ಮಪ್ಪ, ಶಿವರಾಮಗೌಡ, ಬಿ.ಎಂ. ಜಡೆಸ್ವಾಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಇದಲ್ಲದೆ ವೈದ್ಯರಾದ ನವೀನ್ ಕುಮಾರ್, ನಾಗಪ್ರಿಯಾ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮೊಹಮ್ಮದ್ ಖಾಸಿಂ, ರಾಷ್ಟ್ರೀಯ ಸಾಕ್ಷರತಾ ಮತ್ತು ಇಂಡಿಯನ್ ರೆಡ್ ಕ್ರಾಸ್ ಸೊಸೈಟಿ ಸದಸ್ಯ ಅಬ್ದುಲ್ ನಬಿ, ಡಿ ಫಾರ್ಮಸಿ ಕಾಲೇಜಿನ ಉಪನ್ಯಾಸಕಿ ಅರುಣಾ, ಆರೋಗ್ಯ ಆಪ್ತ ಸಮಾಲೋಚಕ ಮಲ್ಲೇಶಪ್ಪ ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಗಳಾದ ನಾರೇಶ್, ಪ್ರಿಯಾಂಕ, ವಿಜಯಕುಮಾರ್, ಭವಾನಿ ಸೇರಿದಂತೆ ವೈದ್ಯರ ತಂಡ ಶಿಬಿರದಲ್ಲಿ ಭಾಗವಹಿಸಿದ್ದರು.


ನಿಜಗುಣಾನಂದ್ ಸ್ವಾಮಿ ಅವರಿಗೆ ಸರ್ಕಾರ ರಕ್ಷಣೆ ನೀಡಲಿ : ಬಾಬುರಾವ್ ಹೊನ್ನಾ

ಬೀದರ್ ,ಮಾ.06-

ನಿಜಗುಣಾನಂದ ಸ್ವಾಮಿ ಅವರು ಬಸವಧರ್ಮ ಮತ್ತು ಲಿಂಗಾಯತ ಧರ್ಮದ ಕುರಿತು ವೈಜ್ಞಾನಿಕ ಚಿಂತನೆ ಮಾಡುತ್ತಿರುವ ಹಿನ್ನೆಲೆಯಲ್ಲಿ ಅವರ ವಿರುದ್ಧ ವಿರೋಧ ವ್ಯಕ್ತವಾಗುತ್ತಿದೆ. ಅವರ ಮೇಲೆ ದಾಳಿ ನಡೆಯುವ ಸಾಧ್ಯತೆ ಇರುವುದರಿಂದ ಸರ್ಕಾರ ರಕ್ಷಣೆ ಒದಗಿಸಬೇಕು ಎಂದು ಬಾಬುರಾವ್ ಹೊನ್ನಾ ಒತ್ತಾಯಿಸಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಲಿಂಗಾಯತವನ್ನು ಸ್ವತಂತ್ರ ಧರ್ಮವೆಂದು ಪ್ರತಿಪಾದಿಸಿದ್ದ ಎಂ.ಎಂ. ಕಲಬುರ್ಗಿ ಅವರ ಹತ್ಯೆ ನಡೆದಿತ್ತು. ಅದೇ ರೀತಿ ಗೌರಿ ಲಂಕೇಶ್, ನರೇಂದ್ರ ದಾಭೋಲ್ಕರ್ ಮತ್ತು ಗೋವಿಂದ ಪಾನ್ಸಾರೆ ಅವರ ಹತ್ಯೆಗಳನ್ನೂ ಉಲ್ಲೇಖಿಸಿದರು. ಪ್ರಗತಿಪರ ಚಿಂತಕರ ವಿರುದ್ಧ ಬೆದರಿಕೆಗಳು ನಡೆದಿರುವ ಉದಾಹರಣೆಗಳು ಇವೆ ಎಂದು ಹೇಳಿದರು.

ಗೌರಿ ಲಂಕೇಶ್ ಅವರ ನಂತರ ಕೆ.ಎಸ್. ಭಗವಾನ್ ಅವರ ಮೇಲೂ ಹತ್ಯೆ ಯತ್ನದ ಮಾಹಿತಿ ಇತ್ತು. ಈ



ಹಿನ್ನೆಲೆಯಲ್ಲಿ ನಿಜಗುಣಾನಂದ ಸ್ವಾಮಿಯವರ ಮೇಲೂ ದಾಳಿ ಸಾಧ್ಯತೆ ಇರುವುದರಿಂದ ರಾಜ್ಯ ಸರ್ಕಾರ ತಕ್ಷಣ ರಕ್ಷಣೆ ನೀಡಬೇಕು ಎಂದು ಮನವಿ ಮಾಡಿದರು.

ದೇಶವು ಪ್ರಜಾಪ್ರಭುತ್ವ ಸಂವಿಧಾನ ಹೊಂದಿದ್ದು, ಧರ್ಮ ಮತ್ತು ರಾಜಕೀಯವನ್ನು ಬೆರೆಸಿ ಪ್ರಚೋದನಾತ್ಮಕ ಭಾಷಣ ಮಾಡುತ್ತಿರುವವರ ವಿರುದ್ಧ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಓಂಪ್ರಕಾಶ್ ರೊಟ್ಟೆ ಮಾತನಾಡಿ, ಕನ್ನೇರಿ ಸ್ವಾಮಿಯವರ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು. ಸಂಘ ಪರಿವಾರದ ಮುಖ್ಯಸ್ಥ ಮೋಹನ್ ಭಾಗವತ್ ಅವರ ಹೆಸರು ಉಲ್ಲೇಖಿಸಿ ರಾಜಕೀಯ ಉದ್ದೇಶಗಳ ಬಗ್ಗೆ ಟೀಕಿಸಿದರು. ಬಸವಾದಿ ಶರಣರ ಹಿಂದೂ ಸಮಾವೇಶದ ನೇತೃತ್ವ ವಹಿಸಿಕೊಂಡಿರುವ ಕನ್ನೇರಿ ಸ್ವಾಮಿ ಅಶಾಂತಿಯ ಬೀಜ ಬಿತ್ತುತ್ತಿದ್ದಾರೆ ಎಂದು ಆರೋಪಿಸಿದರು.

ಹಾಗೆಯೇ ಬಸನಗೌಡ ಪಾಟೀಲ್ ಯತ್ನಾಳ್ ಹಾಗೂ ಕೆ.ಎಸ್. ಈಶ್ವರಪ್ಪ ಅವರ ಹೆಸರುಗಳನ್ನೂ ಉಲ್ಲೇಖಿಸಿದರು. ಒಟ್ಟಿನಲ್ಲಿ, ನಿಜಗುಣಾನಂದ ಸ್ವಾಮಿಗೆ ಸರ್ಕಾರದಿಂದ ಭದ್ರತೆ ಒದಗಿಸಿ, ಪ್ರಚೋದನಾತ್ಮಕ ಹೇಳಿಕೆಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಅವರು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಸಂತೋಷ್ ಜೋಳದಾಪಗೆ, ಜಗದೀಶ್ವರ್ ಬಿರಾದಾರ್, ಮಹೇಶ್ ಗೋರನಾಳಕರ್, ಸಿದ್ದು ಫುಲಾರೆ, ರಾಜಕುಮಾರ್ ಪಾಟೀಲ್, ಪ್ರಕಾಶ್ ಇದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ

ಇರಾನ್ ಯುದ್ಧದ ಪ್ರಭಾವ: ರೂಪಾಯಿ ಮೌಲ್ಯ 92 ರೂ.ಗೆ ಕುಸಿತ; 9.7 ಲಕ್ಷ ಕೋಟಿ ರೂ. ನಷ್ಟ



ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಇರಾನ್ ಮತ್ತು ಅಮೆರಿಕ-ಇಸ್ರೇಲ್ ನಡುವಿನ ಯುದ್ದವು ಆ ರಾಷ್ಟ್ರಗಳ ಮೇಲೆ ಮಾತ್ರವಲ್ಲದೆ, ಜಾಗತಿಕವಾಗಿಯೂ ಭಾರೀ ಪರಿಣಾಮ ಬೀರುತ್ತಿದೆ. ಈಗಾಗಲೇ, ತೈಲ ಸೇರಿದಂತೆ ಹಲವು ವಹಿವಾಟುಗಳ ಮೇಲೆ ಗಂಭೀರ ಪ್ರಭಾವ ಬೀರಿದೆ. ಭಾರತಕ್ಕೆ ತೈಲ, ಅಕ್ಕಿ, ಚಹಾ ಉತ್ಪನ್ನಗಳ ರಫ್ತು-ಆಮದು ವ್ಯವಸ್ಥೆಯು ಅಸ್ತವ್ಯಸ್ತವಾಗಿದೆ. ಯುದ್ದವು ಭಾರತೀಯ ಆರ್ಥಿಕತೆಗೆ ಆಘಾತಕಾರಿ ಹೊಡೆತ ನೀಡಿದ್ದು, ಭಾರತೀಯ ರೂಪಾಯಿ ಮೌಲ್ಯವು ಇತಿಹಾಸದಲ್ಲೇ ಮೊದಲ ಬಾರಿಗೆ ಪ್ರತಿ ಡಾಲರ್‌ಗೆ 92 ರೂ.ಗಳ ಗಡಿ ದಾಟಿದೆ. ಅಲ್ಲದೆ, ಭಾರತೀಯ ಶೇರು ಮಾರುಕಟ್ಟೆಯ ಹೂಡಿಕೆದಾರರು ಸುಮಾರು 9.7 ಲಕ್ಷ ಕೋಟಿ ರೂ. ನಷ್ಟ ಅನುಭವಿಸಿದ್ದಾರೆ.

ಬುಧವಾರದ ವಹಿವಾಟಿನಲ್ಲಿ ರೂಪಾಯಿ ಮೌಲ್ಯವು 55 ಪೈಸೆ ಕುಸಿದಿದ್ದು, 92.03 ಮಟ್ಟಕ್ಕೆ ತಲುಪಿದೆ. ಇದು ಈ ಹಿಂದೆ ಜನವರಿ 2026ರಲ್ಲಿ ದಾಖಲಾಗಿದ್ದ 91.99 ಮತ್ತು 92.02ರ ಮಟ್ಟವನ್ನೂ ಮೀರಿದೆ. ಇರಾನ್ ಮೇಲಿನ ಮಿಲಿಟರಿ ದಾಳಿ ಮತ್ತು ತೈಲ ಪೂರೈಕೆಯಲ್ಲಿ ಉಂಟಾಗಬಹುದಾದ ವ್ಯತ್ಯಯದ ಭೀತಿಯಿಂದ ಜಾಗತಿಕ ಹೂಡಿಕೆದಾರರು ಸುರಕ್ಷಿತ ಹೂಡಿಕೆಯತ್ತ ಮುಖ ಮಾಡಿರುವುದು ಈ ಕುಸಿತಕ್ಕೆ ಪ್ರಮುಖ ಕಾರಣವಾಗಿದೆ. ಬಿಎಸ್‌ಇ () ಪಟ್ಟಿಯಲ್ಲಿರುವ ಕಂಪನಿಗಳ ಒಟ್ಟು ಮಾರುಕಟ್ಟೆ ಮೌಲ್ಯವು ಸೋಮವಾರ 456.17 ಲಕ್ಷ ಕೋಟಿ ರೂ. ಇತ್ತು. ಅದು ಕೇವಲ ಎರಡು ದಿನಗಳಲ್ಲಿ 446.47 ಲಕ್ಷ ಕೋಟಿ ರೂ.ಗೆ ಇಳಿಕೆಯಾಗಿದೆ. 9.7 ಲಕ್ಷ ಕೋಟಿ ರೂ. ನಷ್ಟವಾಗಿದೆ.

ಶೇರು ಮಾರುಕಟ್ಟೆಯ ಪ್ರಮುಖ ಸೂಚ್ಯಂಕಗಳಾದ ಸೆನ್ಸೆಕ್ಸ್ 1,710 ಅಂಕಗಳಷ್ಟು ಭಾರಿ ಕುಸಿತ ಕಂಡು 78,529ಕ್ಕೆ ತಲುಪಿದರೆ, ನಿಫ್ಟಿ-50 ಸುಮಾರು 477 ಅಂಕಗಳನ್ನು ಕಳೆದುಕೊಂಡು 24,389ಕ್ಕೆ ಇಳಿದಿದೆ. ಇದು ಕಳೆದ ಏಳು ತಿಂಗಳಲ್ಲಿ ನಿಫ್ಟಿ ಕಂಡ ಅತ್ಯಂತ ಕನಿಷ್ಠ ಮಟ್ಟವಾಗಿದೆ.

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್ ಜೊತೆಗಿನ ಮಾತುಕತೆಗಳು ಸಫಲವಾಗುವ ಸಾಧ್ಯತೆ ಇಲ್ಲ ಮತ್ತು ಯುದ್ದವು ಇನ್ನೂ ನಾಲ್ಕೈದು ವಾರಗಳ ಕಾಲ ಮುಂದುವರಿಯಬಹುದು ಎಂದು ಎಚ್ಚರಿಸಿದ್ದರಿಂದ ಹೂಡಿಕೆದಾರರಲ್ಲಿ ಭೀತಿ ಹೆಚ್ಚಾಗಿದೆ.

ಜಾಗತಿಕವಾಗಿ ಕಚ್ಚಾ ತೈಲದ ಬೆಲೆಗಳು ಗಗನಕ್ಕೇರುತ್ತಿವೆ. ಬ್ರೆಂಟ್ ಕ್ರೂಡ್ ಬೆಲೆ ಪ್ರತಿ ಬ್ಯಾರೆಲ್‌ಗೆ ಸುಮಾರು 82.53 ಡಾಲರ್‌ಗೆ ತಲುಪಿದೆ. ಭಾರತವು ತನ್ನ ತೈಲ ಅಗತ್ಯದ 85%ರಷ್ಟನ್ನು ವಿದೇಶಗಳಿಂದ ಆಮದು ಮಾಡಿಕೊಳ್ಳುವುದರಿಂದ, ತೈಲ ಬೆಲೆ ಏರಿಕೆಯು ದೇಶದ ಹಣದುಬ್ಬರ ಮತ್ತು ವ್ಯಾಪಾರ ಕೊರತೆಯ ಮೇಲೆ ನೇರ ಪರಿಣಾಮ ಬೀರಲಿದೆ. ವಿದೇಶಿ ಸಾಂಸ್ಥಿಕ ಹೂಡಿಕೆದಾರರು () ದೊಡ್ಡ ಮಟ್ಟದಲ್ಲಿ ಶೇರುಗಳನ್ನು ಮಾರಾಟ ಮಾಡುತ್ತಿರುವುದು ಮಾರುಕಟ್ಟೆಯ ಮೇಲೆ ಒತ್ತಡವನ್ನು ಇನ್ನಷ್ಟು ಹೆಚ್ಚಿಸಿದೆ.

ಎಲ್ ಆಂಡ್ ಟಿ, ಇಂಡಿಗೋ, ಅದಾನಿ ಪೋರ್ಟ್ಸ್ ಹಾಗೂ ಮಹೀಂದ್ರಾ ರೀತಿಯ ದೊಡ್ಡ ಕಂಪನಿಗಳ ಶೇರುಗಳು 3 ರಿಂದ 6%ರಷ್ಟು ಕುಸಿತ ಕಂಡಿವೆ. ಆದರೂ, ಮಾರುಕಟ್ಟೆ ತಜ್ಞರಾದ ವಿ.ಕೆ. ವಿಜಯಕುಮಾರ್ ಅವರು ಹೂಡಿಕೆದಾರರು ಆತಂಕಕ್ಕೆ ಒಳಗಾಗಬಾರದು ಎಂದು ಸಲಹೆ ನೀಡಿದ್ದಾರೆ. ದೀರ್ಘಕಾಲದ ಹೂಡಿಕೆದಾರರು ಇಂತಹ ಕುಸಿತದ ಸಂದರ್ಭಗಳನ್ನು ಬಳಸಿಕೊಂಡು ಉತ್ತಮ ಗುಣಮಟ್ಟದ ಶೇರುಗಳನ್ನು ಖರೀದಿಸಬಹುದು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.



ವ್ಯಾಸನತಾಂಡದಲ್ಲಿ ಮೂಲಭೂತ ಸೌಲಭ್ಯಗಳಿಗೆ ಕ್ರಮ ಕೈಗೊಳ್ಳಿ: ಶಾಸಕಿ ಎಂ.ಪಿ.ಲತಾ ಮಲ್ಲಿಕಾರ್ಜುನ

ವಿಜಯನಗರ, ಮಾ.06-

ವ್ಯಾಸನತಾಂಡಕ್ಕೆ ಸ್ವಚ್ಛತೆ, ಸಮರ್ಪಕ ಕುಡಿಯುವ ನೀರು ಪೂರೈಕೆ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಬೇಕು ಹಾಗೂ ಗ್ರಾಮಗಳಲ್ಲಿ ಸ್ವಚ್ಛತೆ ಕಾಪಾಡುವತ್ತ ಅಧಿಕಾರಿಗಳು ವಿಶೇಷ ಗಮನ ಹರಿಸಬೇಕು ಎಂದು ಶಾಸಕಿ ಎಂ.ಪಿ.ಲತಾ ಮಲ್ಲಿಕಾರ್ಜುನ ಸೂಚಿಸಿದರು.

ತಾಲೂಕಿನ ವ್ಯಾಸನತಾಂಡ ಮತ್ತು ಹಲುವಾಗಲು ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಅವರು ಮಾತನಾಡಿದರು.

ಗ್ರಾಮೀಣ ಭಾಗಗಳಿಗೆ ಸುಗಮ ಸಂಚಾರ ಸೌಲಭ್ಯ ಕಲ್ಪಿಸುವ ಉದ್ದೇಶದಿಂದ ಈ ರಸ್ತೆ ನಿರ್ಮಿಸಲಾಗುತ್ತಿದೆ. ವ್ಯಾಸನತಾಂಡದಿಂದ ವ್ಯಾಸನತಾಂಡ ಕ್ರಾಸ್‌ವರೆಗೆ ರಸ್ತೆ ಹಾಳಾಗಿರುವುದರಿಂದ, ಅದನ್ನು ಸಿಸಿ ರಸ್ತೆಯಾಗಿ ಅಭಿವೃದ್ಧಿಪಡಿಸುವ ಕಾಮಗಾರಿ ಕೆಲವೇ ದಿನಗಳಲ್ಲಿ ಪ್ರಾರಂಭವಾಗಲಿದೆ ಎಂದು ಹೇಳಿದರು.

ಕೆ.ಕಲ್ಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿರುವ ಎಲ್ಲಾ ಹಳ್ಳಿಗಳಲ್ಲೂ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು. ಬೇಸಿಗೆ ಆರಂಭವಾಗುತ್ತಿರುವ ಹಿನ್ನೆಲೆ ಎಲ್ಲಿಯೂ ಕುಡಿಯುವ ನೀರಿನ ಸಮಸ್ಯೆ ಎದುರಾಗಬಾರದು. ಪ್ರತಿಯೊಂದು ಹಳ್ಳಿಯಲ್ಲೂ ಸಮರ್ಪಕವಾಗಿ ಕುಡಿಯುವ ನೀರು ಪೂರೈಕೆ ಮಾಡುವಂತೆ ಪಿಡಿಒಗೆ ಅವರು ಸೂಚನೆ ನೀಡಿದರು.

ಇದೇ ವೇಳೆ ತಾಲೂಕಿನ ಹಲುವಾಗಲು ಗ್ರಾಮದಿಂದ ಕುಂಚೂರು ಕೆರೆ ತಾಂಡದವರೆಗೆ ಅಂದಾಜು 75 ಲಕ್ಷ ರೂ. ವೆಚ್ಚದಲ್ಲಿ ಸಿಸಿ ರಸ್ತೆ ಅಭಿವೃದ್ಧಿ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಯಿತು.

ಈ ಸಂದರ್ಭದಲ್ಲಿ ತಾಲ್ಲೂಕು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಂ.ವಿ. ಅಂಜಿನಪ್ಪ, ಗ್ಯಾರಂಟಿ ಸಮಿತಿ ಅಧ್ಯಕ್ಷ ಉದಯ್ ಶಂಕರ್, ಪ್ರಚಾರ ಸಮಿತಿ ಅಧ್ಯಕ್ಷ ಕೃಷ್ಣ ನಾಯ್ಕ್, ಮತ್ತೂರು ಬಸವರಾಜ್, ನೀಲಗುಂದ ಸಹಕಾರ ಸಂಘದ ನಿರ್ದೇಶಕ ತಿರುಪತಿ ನಾಯ್ಕ್, ಮಾಜಿ ಗ್ರಾಮ ಪಂಚಾಯಿತಿ ಸದಸ್ಯ ಸಂತೋಷ್ ನಾಯ್ಕ್, ಬಸವರಾಜ್ ನಾಯ್ಕ್, ಷಣ್ಮುಖ ನಾಯ್ಕ್, ಕೊಟ್ರೇಶ್ ನಾಯ್ಕ್, ಲ್ಯಾಂಡ್ ಆರ್ಮಿ ಎಇಇ ಶಂಕರ್ ನಾಯ್ಕ್, ನೂತನ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಇರಾನ್ ಅಧ್ಯಕ್ಷರ ಹತ್ಯೆ : ಭಾರತದ ಮೌನ ಸರಿಯೇ..?

ಖಮೇನಿಯನ್ನು ಹತ್ಯೆಗೈಯುವುದು ವಿಶ್ವಸಂಸ್ಥೆಯ ಆಶಯ, ನಿಯಮಗಳ ಮಾತ್ರವಲ್ಲ ಅಂತರರಾಷ್ಟ್ರೀಯ ಮಾನವ ಹಕ್ಕುಗಳ ಸ್ಪಷ್ಟ ಉಲ್ಲಂಘನೆ ಅಲ್ಲವೇ? ಇದನ್ನು ರಷ್ಯಾ, ಚೀನಾದಂತೆ ಭಾರತ ಖಂಡಿಸಲೇಬೇಕಿತ್ತು. ಅದರಲ್ಲೂ ಇರಾನ್ ಭಾರತದ ಮಿತ್ರರಾಷ್ಟ್ರವೂ ಹೌದು, ತೈಲ ಸೇರಿದಂತೆ ಹತ್ತಾರು ವ್ಯಾಪಾರ ವ್ಯವಹಾರ ಎರಡು ದೇಶಗಳ ನಡುವೆ ದಶಕಗಳಿಂದ ನಡೆದುಕೊಂಡು ಬಂದಿದೆ. ಇಷ್ಟೆಲ್ಲ ಬಾಂಧವ್ಯ ಇದ್ದರೂ ಖಮೇನಿ ಹತ್ಯೆಯನ್ನು ಖಂಡಿಸಿ ಮೋದಿ ಒಂದೇ ಒಂದು ಟ್ವೀಟ್ ಕೂಡ ಮಾಡಿಲ್ಲ, ವಿದೇಶಾಂಗ ಇಲಾಖೆ ತನ್ನ ಪ್ರತಿಕ್ರಿಯೆಯನ್ನು ವ್ಯಕ್ತಪಡಿಸದೇ ಮೌನವಾಗಿದೆ.

ಅಮೆರಿಕ ಅಧ್ಯಕ್ಷರಾಗಿ ಎರಡನೇ ಬಾರಿ ಆಯ್ಕೆಯಾದ ಡೊನಾಲ್ಡ್ ಟ್ರಂಪ್ ಆಡುತ್ತಿರುವ ಆಟದಲ್ಲಿ ವಿಶ್ವದಲ್ಲಿ ಶಾಂತಿ ಮರೆಯಾಗುತ್ತಿದೆ. ಅದರಲ್ಲೂ ಕಳೆದೊಂದು ವರ್ಷದಲ್ಲಿ ಈತನ ಹುಚ್ಚಾಟ ಅತಿಯಾಗಿದ್ದು, ಹಲವಾರು ರಾಷ್ಟ್ರಗಳ ಸಾರ್ವಭೌಮತ್ವಕ್ಕೆ ಧಕ್ಕೆಯಾಗಿದೆ. ಇದು ವಿಶ್ವಸಂಸ್ಥೆಯಲ್ಲಿನ ಒಡಂಬಡಿಕೆಯ ಸ್ಪಷ್ಟ ಉಲ್ಲಂಘನೆ ಮಾತ್ರವಲ್ಲ ಭವಿಷ್ಯದಲ್ಲಿ ಪ್ರಪಂಚದ ಹಲವಾರು ರಾಷ್ಟ್ರಗಳ ಅಸ್ತಿತ್ವವನ್ನೇ ಅಲುಗಾಡಿಸುವ ಮುನ್ಸೂಚನೆ ಎಂದರೆ ತಪ್ಪಾಗಲಾರದು. ಎಲ್ಲದಕ್ಕೂ ಯುದ್ದವೇ ಪರಿಹಾರ ಎನ್ನುವಂತಹ ನಿಲುವು ಟ್ರಂಪ್ ನದ್ದು ಎಂಬಂತಾಗಿದೆ. ಅದರ ವರ್ತಮಾನದ ಪರಿಣಾಮವೇ ಇರಾನ್ ಅಧ್ಯಕ್ಷರ ಹತ್ಯೆ ಹಾಗೂ ಮುಂದುವರೆದಿರುವ ಇರಾನ್ ಇಸ್ರೇಲ್ ಯುದ್ದ!

ಒಂದನೇ ವಿಶ್ವಯುದ್ದದ ನಂತರ ಅಸ್ತಿತ್ವಕ್ಕೆ ಬಂದ ಲೀಗ್ ಆಫ್ ನೇಷನ್ಸ್ ವಿಫಲವಾಗಿ ಎರಡನೇ ಮಹಾಯುದ್ದ ಸಂಭವಿಸಿತು. ಹಾಗಾಗಿ ಎರಡನೇ ವಿಶ್ವಯುದ್ದ ಮುಗಿದ ಮೇಲೆ ಎಲ್ಲ ರಾಷ್ಟ್ರಗಳು ಪರಸ್ಪರ ಸಹಕಾರ ಮತ್ತು ಗೌರವದಿಂದ ನಡೆದುಕೊಳ್ಳುವ ಸಲುವಾಗಿ ವಿಶ್ವಸಂಸ್ಥೆಯನ್ನು ಸ್ಥಾಪಿಸಲಾಯಿತು. ಯಾವುದೇ ರಾಷ್ಟ್ರವಾಗಲೀ ಇತರೇ ದೇಶದ ಆಂತರಿಕ ವ್ಯವಹಾರದಲ್ಲಿ ಹಸ್ತಕ್ಷೇಪ ನಡೆಸುವುದಾಗಲೀ, ಆ ದೇಶದ ಸಾರ್ವಭೌಮತ್ವಕ್ಕೆ ಧಕ್ಕೆ ತರುವುದಾಗಲೀ ವಿಶ್ವಸಂಸ್ಥೆಯ ನಿಯಮದ ಉಲ್ಲಂಘನೆ. ಆದರೆ ಬರಬರುತ್ತಾ ವಿಶ್ವಸಂಸ್ಥೆ ಹಲ್ಲಿಲ್ಲದ ಹಾವಿನಂತಾಗಿ, ಅಭಿವೃದ್ಧಿಶೀಲ ಹಾಗೂ ಬಡರಾಷ್ಟ್ರಗಳ ಹಿತ ಕಾಯುವಲ್ಲಿ ಸಂಪೂರ್ಣ ವಿಫಲವಾಗಿದ್ದು ಮಾತ್ರವಲ್ಲದೆ ಅಮೇರಿಕಾದ ಕೈಗೊಂಬೆಯಂತಾಗಿರುವುದು ವಾಸ್ತವ ಸತ್ಯ. ಇಂತಹ ಸಂದರ್ಭದಲ್ಲಿ ವಿಟೋ ಅಧಿಕಾರವಿರುವ ರಾಷ್ಟ್ರಗಳ ನಡುವೆ ಹೊಂದಾಣಿಕೆಯಿಲ್ಲದೆ ಅವರವರ ಹಿತರಕ್ಷಣೆಗಷ್ಟೇ ಅವರ ಆದ್ಯತೆಯಂತಾಗಿದೆ. ಬಲಾಢ್ಯರ ಶಕ್ತಿಪ್ರದರ್ಶನದಲ್ಲಿ ಬಡರಾಷ್ಟ್ರಗಳು ಹಾಗೂ ಪ್ರಗತಿಶೀಲ ದೇಶಗಳು ಬಲಿಯಾಗುತ್ತಿವೆ. ವರ್ತಮಾನದಲ್ಲಿ ವಿಶ್ವದಲ್ಲಿ ಅಮೇರಿಕಾದ ಇಚ್ಛೆಯಂತೆ ಈ ಜಗತ್ತು ನಡೆಯಬೇಕು ಎನ್ನುವಂತಾಗಿದೆ. ಅವರದ್ದೇ ಆದ ವ್ಯೂಹ ರಚಿಸಿಕೊಂಡು ಅವರ ಶತ್ರುರಾಷ್ಟ್ರಗಳ ಜೊತೆ ಸ್ನೇಹ ಬೆಳೆಸುವವರನ್ನು ಬೆದರಿಸುವ, ಧಮನಿಸುವ ಕಾರ್ಯ ನಿರಂತರವಾಗಿ ನಡೆಯುತ್ತಿದೆ. ಹೀಗಿರುವಾಗ ವಿಶ್ವಸಂಸ್ಥೆಯ ಅಗತ್ಯವಾದರೂ ಏನು? ಈ ಪ್ರಕ್ಷುಬ್ದತೆ ಹಾಗೂ ಸರ್ವಾಧಿಕಾರದ ವಿರುದ್ದ ಹೋರಾಡುವುದಾದರೂ ಹೇಗೆ ಮತ್ತು ಯಾರು? ಎನ್ನುವುದು ಯಕ್ಷಪ್ರಶ್ನೆಯಾಗಿದೆ.

ಅಮೇರಿಕವನ್ನು ಆಳಿದ ಹೆಚ್ಚಿನ ಅಧ್ಯಕ್ಷರು ಸರ್ವಾಧಿಕಾರಿಗಳಂತೆ ವರ್ತಿಸಿದವರು ಹಾಗೂ ತಮ್ಮ ಹಿತಾಸಕ್ತಿಯನ್ನು ಇತರ ರಾಷ್ಟ್ರಗಳ ಮೇಲೆ ಹೇರಿದವರು. ಅದರಲ್ಲೂ ಈಗಿನ ಅಧ್ಯಕ್ಷ ಟ್ರಂಪ್ ಇಡೀ ವಿಶ್ವವೇ ತನ್ನ ಅಣತಿಯಂತೆ ನಡೆಯಬೇಕೆಂಬ ಉತ್ಕಟತೆ ಹೊಂದಿರುವ ಮನುಷ್ಯ. ಯಾವ ದೇಶದಲ್ಲಿ ತೈಲ ನಿಕ್ಷೇಪಗಳಿವೆ, ಅದಿರು ನಿಕ್ಷೇಪಗಳಿವೆ, ತಮ್ಮ ಉತ್ಪನ್ನಗಳಿಗೆ ಉತ್ತಮ ಮಾರುಕಟ್ಟೆ ದೊರೆಯಬಹುದು ಎಂಬಿತ್ಯಾದಿ ಅಂಶಗಳನ್ನಿಟ್ಟುಕೊಂಡು ಆ ರಾಷ್ಟ್ರವನ್ನು ತನ್ನ ಸುಪರ್ದಿಗೆ ತೆಗೆದುಕೊಳ್ಳಲು ಹಪಹಪಿಸುವ ಜಾಯಮಾನ ಟ್ರಂಪ್ ನದ್ದು. ಆತನ ತಾಳಕ್ಕೆ ಕುಣಿಯದಿದ್ದರೆ ಆ ದೇಶದ ಮೇಲೆ ನೇರ ಆಕ್ರಮಣ ಅಥವಾ ಅಲ್ಲಿ ಆಂತರಿಕ ಗಲಬೆ ಸೃಷ್ಟಿಸಿ ಅಲ್ಲಿ ತಮ್ಮ ಮಾತು ಕೇಳುವವರ ಕೈಗೆ ಅಧಿಕಾರ ಕೊಡುವ ಕೆಲಸ ಅಮೆರಿಕ ಮಾಡುತ್ತಿದೆ. ವೆನಿಜುವೆಲ್ಲಾದ ಅಧ್ಯಕ್ಷ ತನ್ನ ಮಾತು ಕೇಳಲಿಲ್ಲ ಎಂದು ಅವನನ್ನು ಕಿಡ್ನ್ಯಾಪ್ ಮಾಡಿ ತನ್ನಲ್ಲಿ ಬಂಧಿಸಿಟ್ಟಿರುವ ಟ್ರಂಪ್ ಇರಾನ್ ಅಧ್ಯಕ್ಷ 86ರ ಹರೆಯದ ಖಮೇನಿಯನ್ನು ನಿರ್ದಯವಾಗಿ ಹತ್ಯೆಗೈದಿದ್ದಾನೆ. ಈ ಸರಣಿ ಇನ್ನೂ ಮುಂದುವರೆಯುವುದರಲ್ಲಿ ಯಾವ ಸಂಶಯವೂ ಇಲ್ಲ. ಆ ದೇಶಗಳಲ್ಲಿ ತಮಗೆ ನಿಷ್ಠರಾಗಿರುವ ಗೊಂಬೆಗಳನ್ನು ತಂದು



ಆಡಳಿತ ಚುಕ್ಕಾಣಿ ನೀಡುವ ಹುನ್ನಾರ ಈತನದ್ದು. ಇವನಿಗೆ ಇಸ್ರೇಲ್ ನ ಸರ್ವಾಧಿಕಾರಿ ನೆತನ್ಯಾಹು ಜೊತೆಯಾಗಿರುವುದು ಜಗತ್ತಿಗೆ ಇನ್ನಷ್ಟು ಆತಂಕವನ್ನುಂಟು ಮಾಡುತ್ತಿದೆ.

ಇಷ್ಟೆಲ್ಲ ಅಮೆರಿಕದ ಆಟಾಟೋಪ ನಡೆಯುತ್ತಿರುವಾಗ ಅಲಿಪ್ತ ನೀತಿ ಹೊಂದಿರುವ ಭಾರತ ಹೇಗೆ ಪ್ರತಿಕ್ರಿಯಿಸುತ್ತಿದೆ ಎನ್ನುವುದನ್ನು ನಾವು ಗಮನಿಸಲೇಬೇಕು. ನಮ್ಮ ಪ್ರಧಾನಿ ಮೋದಿ ಈ ವರೆಗೂ ಇರಾನ್ ಅಧ್ಯಕ್ಷರ ಹತ್ಯೆಯನ್ನು ಖಂಡಿಸಿಲ್ಲ ಎನ್ನುವುದು ಅತ್ಯಂತ ಕಳವಳಕಾರಿ ವಿಚಾರ. ಏಕೆಂದರೆ ಇರಾನ್ ಒಂದು ಸಾರ್ವಭೌಮ ರಾಷ್ಟ್ರವಾಗಿದ್ದು, ಅಲ್ಲಿನ ಅಧ್ಯಕ್ಷರು ತಮ್ಮದೇ ಸಂವಿಧಾನದ ಅಡಿಯಲ್ಲಿ ದೇಶವನ್ನು ಮುನ್ನಡೆಸುತ್ತಿದ್ದಾರೆ. ಅಣುಬಾಂಬ್ ತಯಾರಿಯ ಕುರಿತು ಅಮೆರಿಕ ಹಾಗೂ ಇಸ್ರೇಲ್ ಮಾಡುತ್ತಿರುವ ಆರೋಪಗಳಿಗೆ ಸಾಕ್ಷ್ಯಾಧಾರಗಳಿಲ್ಲ. ಅದೂ ಅಲ್ಲದೇ ಮೂರು ತಿಂಗಳ ಹಿಂದೆ ರಾತ್ರೋರಾತ್ರಿ, ಶಂಕಿತ ಅಣು ಸ್ಥಾವರದ ಮೇಲೆ ದಾಳಿ ನಡೆಸಿ ಉಡಾಯಿಸಿರುವುದಾಗಿ ಇದೇ ಟ್ರಂಪ್ ಹೇಳಿಕೊಂಡಿದ್ದ. ಹಾಗಿರುವಾಗ ಖಮೇನಿಯನ್ನು ಹತ್ಯೆಗೈಯುವುದು ವಿಶ್ವಸಂಸ್ಥೆಯ ಆಶಯ, ನಿಯಮಗಳ ಮಾತ್ರವಲ್ಲ ಅಂತರರಾಷ್ಟ್ರೀಯ ಮಾನವ ಹಕ್ಕುಗಳ ಸ್ಪಷ್ಟ ಉಲ್ಲಂಘನೆ ಅಲ್ಲವೇ? ಇದನ್ನು ರಷ್ಯಾ, ಚೀನಾದಂತೆ ಭಾರತ ಖಂಡಿಸಲೇಬೇಕಿತ್ತು. ಅದರಲ್ಲೂ ಇರಾನ್ ಭಾರತದ ಮಿತ್ರರಾಷ್ಟ್ರವೂ ಹೌದು, ತೈಲ ಸೇರಿದಂತೆ ಹತ್ತಾರು ವ್ಯಾಪಾರ ವ್ಯವಹಾರ ಎರಡು ದೇಶಗಳ ನಡುವೆ ದಶಕಗಳಿಂದ ನಡೆದುಕೊಂಡು ಬಂದಿದೆ. ಇಷ್ಟೆಲ್ಲ ಬಾಂಧವ್ಯ ಇದ್ದರೂ ಖಮೇನಿ ಹತ್ಯೆಯನ್ನು ಖಂಡಿಸಿ ಮೋದಿ ಒಂದೇ ಒಂದು ಟ್ವೀಟ್ ಕೂಡ ಮಾಡಿಲ್ಲ, ವಿದೇಶಾಂಗ ಇಲಾಖೆ ತನ್ನ ಪ್ರತಿಕ್ರಿಯೆಯನ್ನು ವ್ಯಕ್ತಪಡಿಸದೇ ಮೌನವಾಗಿದೆ. ಇದರ ಬದಲಿಗೆ ಮೋದಿ ಅರಬ್ ರಾಷ್ಟ್ರಗಳಲ್ಲಿನ ಅಮೆರಿಕ ಯುದ್ದನೆಲೆಗಳ ಮೇಲೆ ಇರಾನ್ ಮಾಡಿದ ದಾಳಿಯ ಕುರಿತು ಅಲ್ಲಿನ ರಾಜರ ಜೊತೆ ಮಾತನಾಡಿದ್ದಾರೆ. ಇದೇ ಸಮಯದಲ್ಲಿ ಇಸ್ರೇಲ್ ಪ್ರಧಾನಿ ನೆತನ್ಯಾಹು ಭಾರತ ಇಸ್ರೇಲ್ ಜೊತೆಗೆ ನಿಂತಿದ್ದಕ್ಕೆ ಧನ್ಯವಾದ ಸಲ್ಲಿಸಿದ್ದು ಮಾತ್ರವಲ್ಲದೆ ಭಾರತ ಯಹೂದಿಗಳಿಗೆ ಬೆಂಬಲ ನೀಡಿದೆ ಎಂಬಂತೆ ಟ್ವೀಟ್ ಮಾಡಿದ್ದಾರೆ. ಅವರ ಮಾತನ್ನು ಭಾರತ ಅಲ್ಲಗಳೆದಿಲ್ಲ ಎಂಬಲ್ಲಿಗೆ ಭಾರತ ಇಸ್ರೇಲ್ ಪರ ಇದೆ ಎಂಬುದನ್ನು ಪರೋಕ್ಷವಾಗಿ ಒಪ್ಪಿಕೊಂಡಿದೆ ಮೋದಿ ಸರಕಾರ.

ಎರಡು ವಿಶ್ವಯುದ್ದಗಳ ಭೀಕರತೆ ಹಾಗೂ ಪ್ರಬಲ ರಾಷ್ಟ್ರಗಳ ಇತರೇ ರಾಷ್ಟ್ರಗಳನ್ನು ತಮ್ಮ ಸ್ವಾರ್ಥಕ್ಕಾಗಿ ಬಳಸಿಕೊಳ್ಳುವುದನ್ನು ಅರಿತೇ ಅಂದು ಭಾರತದ ಪ್ರಥಮ ಪ್ರಧಾನಿ ಜವಾಹರಲಾಲ್ ನೆಹರೂ ಅವರು 1954ರಲ್ಲಿ ಅಲಿಪ್ತ ನೀತಿಯನ್ನು ಜಾರಿಗೆ ತಂದರು. ಇದರ ಮುಖ್ಯಾಂಶವೆಂದರೆ ಯುದ್ದ ಅಥವಾ ಸಂಘರ್ಷದ ಸಂದರ್ಭದಲ್ಲಿ, ಅಂದು ಹಾಗೂ ಇಂದೂ ಕೂಡ ಬಲಿಷ್ಠ ರಾಷ್ಟ್ರಗಳಾಗಿರುವ ಅಮೇರಿಕಾ ಹಾಗೂ ರಷ್ಯಾ (ಅಂದಿನ ಸೋವಿಯತ್ ಯೂನಿಯನ್)ಗಳಲ್ಲಿ ಯಾರ ಪರವೂ ನಿಲ್ಲದೆ ತಟಸ್ಥರಾಗಿರುವುದು. ಆ ಮೂಲಕ ಯಾವುದೇ ಗುಂಪಿನ ರಾಷ್ಟ್ರಗಳ ಜೊತೆಯೂ ಸಂಘರ್ಷ, ವೈರತ್ವವನ್ನು ಹುಟ್ಟು ಹಾಕಿಕೊಳ್ಳದೇ ಸೌಹಾರ್ಧತೆಯಿಂದ ದೇಶದ ಹಿತ ಕಾಯುವ ವಿದೇಶಾಂಗ ನೀತಿ ಈ ವರೆಗೆ ನಡೆದುಕೊಂಡು ಬಂದಿದೆ. ಆದರೆ ಮೋದಿ ಈ ಜಾಣನಡೆಯನ್ನು ಮುರಿದು ಇಸ್ರೇಲ್ ಜೊತೆ ನಾವಿದ್ದೇವೆ ಎನ್ನುವ ಸಂದೇಶವನ್ನು ಪರೋಕ್ಷವಾಗಿ ಸಾರುವ ಮೂಲಕ ಭಾರತ ಅಮೆರಿಕದ ಗುಂಪಿನಲ್ಲಿ ಗುರುತಿಸಿಕೊಂಡಂತೆ ಚಿತ್ರಣ ಮೂಡಿಸಿದ್ದಾರೆ. ಇದರ ಪರಿಣಾಮ ಚೀನಾ, ರಷ್ಯಾ ಸೇರಿದಂತೆ ಅಮೆರಿಕದ ಶತ್ರು ರಾಷ್ಟ್ರಗಳು ಭಾರತವನ್ನು ತಮ್ಮ ಶತ್ರುರಾಷ್ಟ್ರವಾಗಿ ಪರಿಗಣಿಸುವಂತಾಗಿದೆ. ಹಾಗಂತ ಅಮೆರಿಕ ನಮ್ಮ ಶತ್ರುರಾಷ್ಟ್ರವಾದ ಪಾಕಿಸ್ತಾನವನ್ನು ಭಾರತಕ್ಕಿಂತ ಹೆಚ್ಚು ಆಪ್ತವಾಗಿ ಅಪ್ಪಿಕೊಂಡಿದೆ.

ಹಾಗಾದರೆ ಇರಾನ್ - ಇಸ್ರೇಲ್ ಸಂಘರ್ಷದಲ್ಲಿ ಭಾರತ ಶಾಂತಿ ಸ್ಥಾಪನೆಗೆ ಕರೆ ಕೊಡುವುದು ಬಿಟ್ಟು ಇಸ್ರೇಲ್ ಜೊತೆ ಏಕೆ ನಿಲ್ಲುತ್ತಿದೆ ಎನ್ನುವ ವಿಚಾರ ಕುತೂಹಲಕಾರಿ. ಅದಕ್ಕೆ ಮುಖ್ಯ ಕಾರಣ ಮೋದಿ ಅಮೆರಿಕ ಅಧ್ಯಕ್ಷ ಟ್ರಂಪ್ ಗೆ ಹೆದರಿರುವುದು. ಹೌದು ಇತ್ತೀಚೆಗೆ ಟ್ರಂಪ್ ಮೋದಿಯ ರಾಜಕೀಯ ಭವಿಷ್ಯವನ್ನು ನಾಶ ಮಾಡಬಲ್ಲೆ ಎಂದಿದ್ದ. ಅದರ ನಂತರ ಮೋದಿ ಸರಕಾರ ಭಾರತದ ರೈತರ ಪಾಲಿಗೆ ಮರಣ ಶಾಸನವಾಗಬಲ್ಲ ಅಮೆರಿಕ - ಭಾರತ ವ್ಯಾಪಾರ ಒಪ್ಪಂದಕ್ಕೆ ಚಕಾರ ಎತ್ತದೆ ಸಹಿ ಮಾಡಿತ್ತು. ಮೋದಿಯ ಈ ನಡೆಗೆ ಇಂಬು ಕೊಡುವಂತೆ ಬಹಿರಂಗವಾದ ಎಪ್ಸ್ಟೀನ್‌ಫೈಲ್ ನಲ್ಲಿ ಇಸ್ರೇಲ್ ನಲ್ಲಿ 2017ರಲ್ಲಿ ಮೋದಿ ಅಮೆರಿಕದ ಅಂದಿನ ಅಧ್ಯಕ್ಷರಾಗಿದ್ದ ಇದೇ ಟ್ರಂಪ್ ಎದುರು ಹಾಡಿ, ಕುಣಿದು ಖುಷಿ ಪಡಿಸಿದ್ದರು ಎಂಬ ಉಲ್ಲೇಖವಿದೆ. ಅಂದರೆ ಮೋದಿ ಟ್ರಂಪ್ ಗೆ ಹೆದರುತ್ತಿದ್ದಾರೆ ಹಾಗೂ ತಮ್ಮ ಉಳಿವಿಗಾಗಿ ಭಾರತದ ವಿದೇಶಾಂಗ ನೀತಿಯನ್ನು ಬಲಿಕೊಟ್ಟದ್ದು ಮಾತ್ರವಲ್ಲದೆ ನಮ್ಮ ರೈತರ ಹಿತ ಕಾಯುವಲ್ಲಿ ವಿಫಲರಾಗಿದ್ದಾರೆಯೇ..? ಹಾಗಾಗಿಯೇ ಬಹುಶ: ಅಮೆರಿಕದಿಂದ ಹತ್ಯೆಗೀಡಾದ ಖಮೇನಿಯ ಸಾವಿಗೆ ಪ್ರತಿಕ್ರಿಯಿಸದೆ ಮೋದಿಬಾಬಾ ಮೌನವಾಗಿದ್ದಾರೆ ಎನ್ನುವ ಆರೋಪವೂ ಇದೆ.

ಅತ್ತ ಮೋದಿ ಇಸ್ರೇಲ್ ಭೇಟಿಯ ಅನಂತರ ಎರಡೇ ದಿನದಲ್ಲಿ ಇಸ್ರೇಲ್ ಮೇಲೆ ಅಪ್ರಚೋದಿತ ಇಸ್ರೇಲ್ ಅಮೆರಿಕ ಜಂಟಿ ಆಕ್ರಮಣ ನಡೆದದ್ದು ಕಾಕತಾಳೀಯ ಎನ್ನಬಹುದು. ತಮ್ಮ ಪರಮಾಪ್ತ ಗೌತಮ ಅದಾನಿ ಹಾಗೂ ಆತನ ಅಳಿಯ ಸಾಗರ ಅದಾನಿಯ ಭ್ರಷ್ಟಾಚಾರದ ಪ್ರಕರಣ ಅಮೆರಿಕದ ನ್ಯಾಯಲಯದಲ್ಲಿದೆ. ಒಂದು ವೇಳೆ ಅವರಿಬ್ಬರು ಅಪರಾಧಿಗಳೆಂದು ಘೋಷಿಸಿದರೆ ಅವರನ್ನು ಅಮೇರಿಕಾಕ್ಕೆ ಭಾರತ ಒಪ್ಪಿಸಲೇಬೇಕು. ಅಂತಹ ದುರ್ದಿನಗಳು ತನ್ನ ಪಾಲಿಗೆ ಬರಬಾರದೆಂಬ ಮುನ್ನೆಚ್ಚರಿಕೆಗಾಗಿ ಮೋದಿ ದೇಶದ ಹಿತವನ್ನು ಲೆಕ್ಕಿಸದೇ ಹೀಗೆ ವರ್ತಿಸುತ್ತಿದ್ದಾರೆ ಎನ್ನುವ ಚರ್ಚೆ ರಾಜಕೀಯ ವಲಯದಲ್ಲಿ ಕೇಳಿಬರುತ್ತಿದೆ.

ಇದೆಲ್ಲದರ ನಡುವೆ ಮೋದಿ ಭಕ್ತರು ಖಮೇನಿ ಹತ್ಯೆಯನ್ನು ಸಂಭ್ರಮಿಸುತ್ತಿರುವುದನ್ನು ಸಾಮಾಜಿಕ ಜಾಲತಾಣಗಳಲ್ಲಿ ಕಾಣುತ್ತಿದ್ದೇವೆ. ಕಾರಣ ಇಷ್ಟೇ ಖಮೇನಿ ಮುಸಲ್ಮಾನ್ ನಾಯಕ ಎಂಬುದು. ಟ್ರಂಪ್ ಹೇಗೆ ಅಮೆರಿಕದ ಪರ ಹೋರಾಡುತ್ತಾರೋ, ನೇತನ್ಯಾಹು ಹೇಗೆ ಇಸ್ರೇಲ್ ಪರ ಕಾದಾಡ್ತಾರೊ ಹಾಗೆಯೇ ತನ್ನ ದೇಶ ಇರಾನ್ ಗಾಗಿ ಖಮೇನಿ ಹೋರಾಡಿದ್ದಾರೆ, ದೇಶಕ್ಕಾಗಿ ಅಂಜದೆ, ಶರಣಾಗದೆ ಧೈರ್ಯದಿಂದ ಶತ್ರುಗಳ ಷಡ್ಯಂತ್ರದ ಆಕ್ರಮಣಕ್ಕೆ ಬಲಿಯಾಗಿದ್ದಾರೆ. ಅವರ ದೇಶದ ಮಟ್ಟಿಗೆ ಅವರು ಹುತಾತ್ಮರಾಗಿದ್ದಾರೆ. ಅವರೆಂದಿಗೂ ಭಾರತದ ವಿರುದ್ದ ನಿಂತಿಲ್ಲ, ಮೋದಿಗೆ ಬೆದರಿಕೆ ಹಾಕಿಲ್ಲ, ಭಾರತದ ಆಂತರಿಕ ವ್ಯವಹಾರದಲ್ಲಿ ಹಸ್ತಕ್ಷೇಪ ಮಾಡಿಲ್ಲ. ಮತ್ತೊಂದು ವಿಶೇಷ ಎಂದರೆ ಖಮೇನಿಯವರ ಪೂರ್ಜರು ಇದ್ದದ್ದು ಉತ್ತರಪ್ರದೇಶದ ಬಾರಬಂಕಿ ಜಿಲ್ಲೆಯ ಕಿಂತೂರಿನಲ್ಲಿ. ಆದರೂ ಅವರ ಸಾವಿನ ಕುರಿತು ಒಂದು ವಿಷಾದ ವ್ಯಕ್ತಪಡಿಸುವಷ್ಟು ಸೌಜನ್ಯತೆ ದೇಶದ ಪ್ರಧಾನಿಗೆ ಇಲ್ಲದೆ ಹೋದದ್ದು ದುರದೃಷ್ಟಕರ.

ಎಲ್ಲದಕ್ಕಿಂತ ಮೊದಲು ಮಾನವೀಯತೆ ಎಂಬುದನ್ನು ಮರೆತಿರುವ ನಮ್ಮ ಪ್ರಧಾನಿಗಳು ಮಾದರಿ ವಿದೇಶಾಂಗ ನೀತಿಯನ್ನೇ ಗಾಳಿಗೆ ತೂರಿ ಅಮೆರಿಕ ಇಸ್ರೇಲ್ ಪರ ನಿಂತಿದ್ದಾರೆ. ಅವರ ಪರ ನಿಂತದ್ದು ಕೇವಲ ಮೋದಿ ಅಲ್ಲ, ಇಡೀ ಭಾರತ ಎಂಬಂತೆ ಜಾಗತಿಕವಾಗಿ ಗುರುತಿಸಲಾಗುತ್ತದೆ. ಇದರಿಂದ ಅಮೇರಿಕಾ-ಇಸ್ರೇಲ್ ದೇಶಗಳ ಶತ್ರುಗಳಿಗೆ ಭಾರತವೂ ಈಗ ಶತ್ರುರಾಷ್ಟ್ರ ಆಗಿ ಪರಿವರ್ತನೆಯಾಗುತ್ತಿದೆ. ಇಷ್ಟಕ್ಕೂ ಈ ಯುದ್ದವನ್ನು ಧಾರ್ಮಿಕವಾಗಿ ವಿಶ್ಲೇಷಿಸುವುದಾದರೆ ಶಿಯಾ ಮುಸ್ಲಿಂ ನಾಯಕನೋರ್ವನ ಮೇಲೆ ಕ್ರಿಶ್ಚಿಯನ್ ಹಾಗೂ ಯಹೂದಿ ನಾಯಕರ ಆಕ್ರಮಣ ಅಲ್ಲಿ ತಾನು ಮಹಾ ಹಿಂದೂ ಎಂದು ಹೇಳಿಕೊಳ್ಳುವ ಮೋದಿಯವರಿಗೆ ಏನು ಕೆಲಸ ಅಲ್ಲವೇ.? ಒಂದೇ ಮೂಲದಿಂದ ಬಂದಿರುವ ಈ ಮೂರು ಸಮುದಾಯಗಳು ದಾಯಾದಿಗಳಂತೆ, ಅವರ ನಡುವಿನ ಕಲಹದಲ್ಲಿ ಹೊರಗಿನವರ ಹಸ್ತಕ್ಷೇಪ, ಬೆಂಬಲ ಅನಗತ್ಯ ಹಾಗೂ ಅಪ್ರಸ್ತುತ. ಒಟ್ಟಾರೆಯಾಗಿ ಹೇಳುವುದಾದರೆ ವಿಶ್ವದಲ್ಲಿ ಮಾನವೀಯತೆ ಸಾಯುತ್ತಿದ್ದರೂ, ಶಾಂತಿ, ಅಹಿಂಸೆಯನ್ನು ಬೋಧಿಸಬೇಕಾದ ಭಾರತ ಕಣ್ಣಿದ್ದು ಕುರುಡಾಗಿದೆ, ಬಾಯಿ ಇದ್ದೂ ಮೌನವಾಗಿದೆ. ಹಾಗಾದರೆ ಹಿಂಸೆಯನ್ನು ಖಂಡಿಸದೆ, ಯುದ್ದವನ್ನು ಪ್ರೋತ್ಸಾಹಿಸುವುದೇ ವಿಶ್ವಗುರುವಿನ ಸಾಧನೆಯೇ!?

ಅಮೆರಿಕದ ಇಬ್ಬಗೆ ಅಣ್ವಸ್ತ್ರ ರಾಜಕಾರಣ: ಇರಾನ್ ಬಗ್ಗೆ ಆತಂಕ, ಪಾಕಿಸ್ತಾನದ ಕುರಿತು ಮೌನ!


ಅಣ್ವಸ್ತ್ರ ತಂತ್ರಜ್ಞಾನವನ್ನು ಉತ್ತರ ಕೊರಿಯಾ ಮತ್ತು ಲಿಬಿಯಾಗಳಿಗೆ ರಹಸ್ಯವಾಗಿ ಕಳ್ಳಸಾಗಣೆ ಮಾಡಿದ ಕುಖ್ಯಾತ ಇತಿಹಾಸ ಪಾಕಿಸ್ತಾನಕ್ಕಿದ್ದರೂ, ಭೌಗೋಳಿಕ-ರಾಜಕೀಯದ ಕಾರಣಗಳಿಗಾಗಿ ಆ ದೇಶವನ್ನು ಅಮೆರಿಕ ಓಲೈಸುತ್ತಲೇ ಬಂದಿತು. ಅಣ್ವಸ್ತ್ರ ಪ್ರಸರಣದಂತಹ ಗಂಭೀರ ಆರೋಪಗಳಿದ್ದರೂ ಪಾಕಿಸ್ತಾನದ ನಾಯಕರಿಗೆ ಅಮೆರಿಕದಲ್ಲಿ ಸದಾ ಮನ್ನಣೆ ಮತ್ತು ಬೆಂಬಲ ಸಿಗುತ್ತಲೇ ಇತ್ತು

ಜಾಗತಿಕ ಭೌಗೋಳಿಕ-ರಾಜಕೀಯ ರಂಗದಲ್ಲಿ ಅಣ್ವಸ್ತ್ರಗಳ ವಿಚಾರವು ಸದಾ ಪ್ರಬಲ ರಾಷ್ಟ್ರಗಳ ಸ್ವಹಿತಾಸಕ್ತಿ ಮತ್ತು ದ್ವಂದ್ವ ನೀತಿಗಳ ಸುತ್ತಲೇ ಗಿರಕಿ ಹೊಡೆಯುತ್ತದೆ. ಒಂದು ಕಡೆ, ಇರಾನ್ ಅಣ್ವಸ್ತ್ರ ತಯಾರಿಕೆಯ ಹೊಸ್ತಿಲಲ್ಲಿದೆ ಎಂದು ಇಸ್ರೇಲ್ ಕಳೆದ 35 ವರ್ಷಗಳಿಂದ ಜಗತ್ತಿಗೆ ಎಚ್ಚರಿಸುತ್ತಲೇ ಬಂದಿದೆ. ಆದರೆ, ಇನ್ನೊಂದೆಡೆ, ಜಾಗತಿಕ ಪೊಲೀಸ್ ಎನಿಸಿಕೊಂಡಿರುವ ಅಮೆರಿಕ, ತನ್ನ ಮಿತ್ರರಾಷ್ಟ್ರವಾಗಿದ್ದ ಪಾಕಿಸ್ತಾನ ತನ್ನ ಕಣ್ಣೆದುರೇ ಅಣ್ವಸ್ತ್ರ ತಯಾರಿಸಿದರೂ ಮೌನ ವಹಿಸಿದ್ದಲ್ಲದೆ, ಅದರ ನಾಯಕರಿಗೆ ರಾಜಮರ್ಯಾದೆ ನೀಡಿದ್ದು ಅಂತಾರಾಷ್ಟ್ರೀಯ ರಾಜಕಾರಣದ ಬಹುದೊಡ್ಡ ವಿರೋಧಾಭಾಸವಾಗಿದೆ.

ಮಧ್ಯಪ್ರಾಚ್ಯದ ಪ್ರಬಲ ರಾಷ್ಟ್ರಗಳಾದ ಇರಾನ್ ಮತ್ತು ಇಸ್ರೇಲ್ ನಡುವಿನ ವೈರತ್ವ ಜಗಜ್ಜಾಹೀರಾಗಿದ್ದು, ಇಸ್ರೇಲ್ ನಾಯಕರು ದಶಕಗಳಿಂದಲೂ ಇರಾನ್ ವಿರುದ್ದ ಜಾಗತಿಕ ಮಟ್ಟದಲ್ಲಿ ಆತಂಕ ಸೃಷ್ಟಿಸುತ್ತಿದ್ದಾರೆ. 1990ರ ದಶಕದ ಆರಂಭದಿಂದಲೂ ''ಇರಾನ್ ಕೇವಲ ಕೆಲವು ತಿಂಗಳುಗಳಲ್ಲಿ ಅಥವಾ ವರ್ಷಗಳಲ್ಲಿ ಅಣ್ವಸ್ತ್ರ ತಯಾರಿಸಲಿದೆ, ಅದಕ್ಕೆ ಕೇವಲ ಒಂದು ತಿಂಗಳಷ್ಟೇ ಬಾಕಿ ಇದೆ'' ಎಂಬಂತಹ ಹೇಳಿಕೆಗಳನ್ನು ಇಸ್ರೇಲ್ ನಿರಂತರವಾಗಿ ನೀಡುತ್ತಲೇ ಬಂದಿದೆ.

ಇದಕ್ಕೆ ಸ್ಪಷ್ಟ ಉದಾಹರಣೆಯೆಂದರೆ, 1992ರಲ್ಲಿ ಇಸ್ರೇಲ್‌ನ ಆಗಿನ ಸಂಸದ ಹಾಗೂ ಮುಂದಿನ ಪ್ರಧಾನಿ ಬೆಂಜಮಿನ್ ನೆತನ್ಯಾಹು ಅವರು, ''ಇರಾನ್ ಇನ್ನು 3 ರಿಂದ 5 ವರ್ಷಗಳಲ್ಲಿ ಅಣ್ವಸ್ತ್ರ ಹೊಂದಲಿದೆ'' ಎಂದು ಅಂದಾಜಿಸಿದ್ದರು. ತದನಂತರ 2012ರ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯಲ್ಲಿ ಬೋರ್ಡ್ ಒಂದರ ಮೇಲೆ ಕೆಂಪು ಗೆರೆ ಎಳೆಯುವ ಮೂಲಕ ಇರಾನ್‌ನ ಯುರೇನಿಯಂ ಪುಷ್ಟೀಕರಣದ ಬಗ್ಗೆ ಆತಂಕ ವ್ಯಕ್ತಪಡಿಸಿದ್ದು, ಇದು ಹೆಚ್ಚಾಗಿ ಅಮೆರಿಕ ಮತ್ತು ಪಶ್ಚಿಮದ ರಾಷ್ಟ್ರಗಳ ಮೇಲೆ ತಂತ್ರಗಾರಿಕೆಯ ಒತ್ತಡ ಹೇರುವ ಭಾಗವಾಗಿತ್ತು.

ಇರಾನ್ ವಿಚಾರದಲ್ಲಿ ಅತ್ಯಂತ ಕಠಿಣ ನಿಲುವು ಹೊಂದಿರುವ ಅಮೆರಿಕ, ತನ್ನ ಮಿತ್ರರಾಷ್ಟ್ರವಾಗಿದ್ದ ಪಾಕಿಸ್ತಾನದ ವಿಷಯದಲ್ಲಿ ತೋರಿದ ಮೃದು ಧೋರಣೆಯು ಅಮೆರಿಕದ ಇಬ್ಬಗೆಯ ನೀತಿಗೆ ಜ್ವಲಂತ ಸಾಕ್ಷಿಯಾಗಿದೆ. ತನಗೆ ಅನುಕೂಲವಾಗುವ ರಾಷ್ಟ್ರಗಳು ಎಷ್ಟೇ ದೊಡ್ಡ ಭದ್ರತಾ ಲೋಪ ಎಸಗಿದರೂ ಅದನ್ನು ಕಡೆಗಣಿಸುವ ಅಮೆರಿಕದ ಪ್ರವೃತ್ತಿ ಇತಿಹಾಸದುದ್ದಕ್ಕೂ ಸ್ಪಷ್ಟವಾಗಿ ಕಂಡುಬಂದಿದೆ.



1970 ಮತ್ತು 1980ರ ದಶಕದಲ್ಲಿ ಪಾಕಿಸ್ತಾನವು ವಿಜ್ಞಾನಿ ಡಾ. ಎ.ಕ್ಯೂ. ಖಾನ್ ಅವರ ನೇತೃತ್ವದಲ್ಲಿ ತನ್ನ ಗುಪ್ತ ಅಣ್ವಸ್ತ್ರ ಕಾರ್ಯಕ್ರಮವನ್ನು ಅತ್ಯಂತ ವೇಗವಾಗಿ ಚುರುಕುಗೊಳಿಸಿತ್ತು. ಅಮೆರಿಕದ ಮೂಗಿನ ಕೆಳಗೇ ಅತ್ಯಂತ ರಹಸ್ಯವಾಗಿ ಅಣು ತಂತ್ರಜ್ಞಾನವನ್ನು ಕದ್ದು, ಅಣ್ವಸ್ತ್ರ ಸಾಮರ್ಥ್ಯವನ್ನು ಅಭಿವೃದ್ಧಿಪಡಿಸುವ ಕೆಲಸವನ್ನು ಪಾಕಿಸ್ತಾನ ಅಡೆತಡೆಯಿಲ್ಲದೆ ಮಾಡುತ್ತಿತ್ತು.

ಪಾಕಿಸ್ತಾನವು ಅಣ್ವಸ್ತ್ರ ತಂತ್ರಜ್ಞಾನವನ್ನು ಕದಿಯುತ್ತಿದೆ ಮತ್ತು ಅಣುಬಾಂಬ್ ತಯಾರಿಸುತ್ತಿದೆ ಎಂಬ ಸ್ಪಷ್ಟ ಹಾಗೂ ನಿಖರ ಮಾಹಿತಿ ಅಮೆರಿಕದ ಗುಪ್ತಚರ ಸಂಸ್ಥೆಗೆ () ಇತ್ತು. ಆದರೂ, 1980ರ ದಶಕದಲ್ಲಿ ಅಫ್ಘಾನಿಸ್ತಾನದಲ್ಲಿ ಸೋವಿಯತ್ ಒಕ್ಕೂಟದ (ರಷ್ಯಾ) ವಿರುದ್ಧ ಹೋರಾಡಲು ಅಮೆರಿಕಕ್ಕೆ ಪಾಕಿಸ್ತಾನದ ಬೆಂಬಲ ಮತ್ತು ನೆಲದ ಅಗತ್ಯವಿದ್ದ ಕಾರಣ, ವಾಷಿಂಗ್ಟನ್ ಆಡಳಿತವು ಬೇಕೆಂತಲೇ ಜಾಣಕುರುಡು ಪ್ರದರ್ಶಿಸಿತು.

ಪಾಕಿಸ್ತಾನಕ್ಕೆ ನೀಡುತ್ತಿದ್ದ ಅಪಾರ ಪ್ರಮಾಣದ ಸೇನಾ ಮತ್ತು ಆರ್ಥಿಕ ನೆರವು ನಿಲ್ಲಬಾರದು ಎಂಬ ಏಕೈಕ ಕಾರಣಕ್ಕೆ ಅಮೆರಿಕದ ಅಂದಿನ ಅಧ್ಯಕ್ಷರಾದ ರೊನಾಲ್ಡ್ ರೇಗನ್ ಮತ್ತು ಜಾರ್ಜ್ ಎಚ್ ಡಬ್ಲ್ಯು ಬುಷ್ ಅವರು, ''ಪಾಕಿಸ್ತಾನದ ಬಳಿ ಅಣ್ವಸ್ತ್ರಗಳಿಲ್ಲ'' ಎಂದು ಅಮೆರಿಕದ ಕಾಂಗ್ರೆಸ್‌ಗೆ ಪ್ರತಿ ವರ್ಷ ಸುಳ್ಳು ಪ್ರಮಾಣಪತ್ರಗಳನ್ನು ನೀಡುತ್ತಿದ್ದರು. ತಮ್ಮ ಕಣ್ಣೆದುರೇ ಪಾಕಿಸ್ತಾನ ಅಣ್ವಸ್ತ್ರ ರಾಷ್ಟ್ರವಾಗಿ ಬೆಳೆಯಲು ಅಮೆರಿಕ ಪರೋಕ್ಷವಾಗಿ ಅವಕಾಶ ಮಾಡಿಕೊಟ್ಟಿತು ಎಂಬುದು ಇಂದು ಕಟು ಸತ್ಯವಾಗಿದೆ.

ಅಣ್ವಸ್ತ್ರ ತಂತ್ರಜ್ಞಾನವನ್ನು ಉತ್ತರ ಕೊರಿಯಾ ಮತ್ತು ಲಿಬಿಯಾಗಳಿಗೆ ರಹಸ್ಯವಾಗಿ ಕಳ್ಳಸಾಗಣೆ ಮಾಡಿದ ಕುಖ್ಯಾತ ಇತಿಹಾಸ ಪಾಕಿಸ್ತಾನಕ್ಕಿದ್ದರೂ, ಭೌಗೋಳಿಕ-ರಾಜಕೀಯದ ಕಾರಣಗಳಿಗಾಗಿ ಆ ದೇಶವನ್ನು ಅಮೆರಿಕ ಓಲೈಸುತ್ತಲೇ ಬಂದಿತು. ಅಣ್ವಸ್ತ್ರ ಪ್ರಸರಣದಂತಹ ಗಂಭೀರ ಆರೋಪಗಳಿದ್ದರೂ ಪಾಕಿಸ್ತಾನದ ನಾಯಕರಿಗೆ ಅಮೆರಿಕದಲ್ಲಿ ಸದಾ ಮನ್ನಣೆ ಮತ್ತು ಬೆಂಬಲ ಸಿಗುತ್ತಲೇ ಇತ್ತು.

ಈ ಅವಕಾಶವಾದಿ ರಾಜಕಾರಣಕ್ಕೆ ಸ್ಪಷ್ಟ ಉದಾಹರಣೆಯೆಂದರೆ, ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಆಡಳಿತಾವಧಿಯಲ್ಲಿ ನಡೆದ ಬೆಳವಣಿಗೆ. ಜುಲೈ 2019ರಲ್ಲಿ ಡೊನಾಲ್ಡ್ ಟ್ರಂಪ್ ಅವರು ಅಂದಿನ ಪಾಕಿಸ್ತಾನದ ಪ್ರಧಾನಿ ಇಮ್ರಾನ್ ಖಾನ್ ಮತ್ತು ಸೇನಾ ಮುಖ್ಯಸ್ಥ ಜನರಲ್ ಖಮರ್ ಜಾವೇದ್ ಬಾಜ್ವಾ ಅವರನ್ನು ಶ್ವೇತಭವನಕ್ಕೆ ಅಧಿಕೃತವಾಗಿ ಆಹ್ವಾನಿಸಿ, ಅವರಿಗೆ ಭವ್ಯ ಔತಣಕೂಟ ಏರ್ಪಡಿಸಿದ್ದರು. ಅಫ್ಘಾನಿಸ್ತಾನದಲ್ಲಿ ತಾಲಿಬಾನ್ ಜೊತೆಗಿನ ಶಾಂತಿ ಮಾತುಕತೆಗೆ ಪಾಕಿಸ್ತಾನ ನೀಡುತ್ತಿರುವ ಸಹಕಾರವನ್ನು ಟ್ರಂಪ್ ಮುಕ್ತಕಂಠದಿಂದ ಶ್ಲಾಘಿಸಿದ್ದರು.

ಈ ಘಟನೆಗಳು ಜಾಗತಿಕ ರಾಜಕಾರಣದ ನೈಜ ಸ್ವರೂಪವನ್ನು ಅನಾವರಣಗೊಳಿಸುತ್ತವೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಯಾವುದೇ ದೇಶವು ನೈತಿಕತೆಯ ಆಧಾರದ ಮೇಲೆ ನಿರ್ಧಾರಗಳನ್ನು ತೆಗೆದುಕೊಳ್ಳುವುದಿಲ್ಲ. ಇಸ್ರೇಲ್‌ನ ನಿರಂತರ ಇರಾನ್ ವಿರೋಧಿ ಅಭಿಯಾನವಾಗಲೀ ಅಥವಾ ಪಾಕಿಸ್ತಾನದ ಅಣ್ವಸ್ತ್ರಗಳ ಬಗ್ಗೆ ಅಮೆರಿಕದ ಕುರುಡು ಮೌನ ಮತ್ತು ಓಲೈಕೆಯಾಗಲೀಇವೆಲ್ಲವೂ ಕೇವಲ ಭದ್ರತಾ ಹಿತಾಸಕ್ತಿ ಮತ್ತು ರಾಜತಾಂತ್ರಿಕ ಅವಕಾಶವಾದವನ್ನು ಆಧರಿಸಿವೆ ಎಂಬುದನ್ನು ಇತಿಹಾಸ ಸಾಬೀತುಪಡಿಸುತ್ತದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR